ಸಂಪುಟ : 9 ಸಂಚಿಕೆ 81 ಪುಟ : 4 ಬೆಲೆ: 3.00 ಮಂಗಳವಾರ ಎಪ್ರಿಲ್ 30 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 81 Pages : 4 Price : 3.00 Tuesday April 30 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಎಚ್.ಕೆ. ಪಾಟೀಲರ ಇಂದಿನ ಪ್ರವಾಸದ ವಿವರ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ತಾರಾ ಪ್ರಚಾರಕರಾದ ಎಚ್.ಕೆ. ಪಾಟೀಲರ ಮೇ.30ರ ಹಾವೇರಿ-ಗದಗ ಲೋಕಸಭಾ ಮತಕ್ಷೇತ್ರದ ಗದಗ ಜಿಲ್ಲೆಯ ಗದಗ-ಬೆಟಗೇರಿ ನಗರದ ಪ್ರವಾಸ ಕಾರ್ಯಕ್ರಮಗಳು ಹೀಗಿವೆ.

ಏ.30ರ ಮುಂಜಾನೆ 8.15ಕ್ಕೆ ವಾರ್ಡ ನಂ.2ರ ಕೊರಮಗುರು ಶ್ರೀ.ಶರಣ ನುಲಿಯ ಚಂದಯ್ಯ ಕೊರಮ ಸಮಾಜ ಕ್ಷೇಮಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದಲ್ಲಿ ಪ್ರಚಾರ ಸಭೆ, 9.30ಕ್ಕೆ ವಾರ್ಡ್ ನಂ.23ರ ಒಕ್ಕಲಗೇರಿ ಓಣಿ, ಗಣಪತಿ ದೇವಸ್ಥಾನ ಹತ್ತಿರ ಪ್ರಚಾರ ಸಭೆ, 10.30ಕ್ಕೆ ವಾರ್ಡ್ ನಂ.33ರ ಬುಡ್ಡಣ್ಣ ಹಬೀಬರವರ ಮನೆಯಲ್ಲಿ ಸಭೆ, ಮಧ್ಯಾಹ್ನ 12ಕ್ಕೆ ವಾರ್ಡ್ ನಂ.21ರ ಯಲಿಗಾರ ಪ್ಲಾಟ, ಗಾರ್ಡನ್ ಹತ್ತಿರ ಇರುವ ಸ್ಥಳದಲ್ಲಿ ಸಭೆ, ಮಧ್ಯಾಹ್ನ 12.30ಕ್ಕೆ ವಾರ್ಡ್ ನಂ.27ರ ಬಸಪ್ಪ ಬಡ್ನಿ ಇವರ ಪ್ಲಾಟ್ ನಂ.26ರಲ್ಲಿ ಗಾಣಿಗ ಸಮಾಜ ಭಾಂದವರ ಸಭೆ, ಸಾಯಂಕಾಲ 5.30ಕ್ಕೆ ನಂ.6ರ ಶರಣ ಬಸವೇಶ್ವರನಗರದ ಪ್ಲಾಟ್ ನಂ.22ರಲ್ಲಿ ಲೋಕಸಭಾ ಚುನಾವಣೆ ಸಭೆ, ಸಾಯಂಕಾಲ 7 ಗಂಟೆಗೆ ವಾರ್ಡ್ ನಂ.35ರ ರಾಮನಗರದಲ್ಲಿರುವ ಸುಡಗಾಡ ಸಿದ್ಧರ ಸಮುದಾಯ ಭವನದ ಎದುರಿಗಿನ ಸ್ಥಳದಲ್ಲಿ ಲೋಕಸಭಾ ಚುನಾವಣೆ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

## ಬಾಲೆಹೊಸೂರಿನಲ್ಲಿ ಜೋಡಿ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೆಹೊಸೂರಿನ ಶ್ರೀ ದಿಂಗಾಲೇಶ್ವರಮಠ ಮತ್ತು ಗ್ರಾಮದ ಆಂಜನೇಯ ಸ್ವಾಮಿ ದೇವಸ್ಥಾನದ ಜಾತ್ರಾಮಹೋತ್ಸವದ ಅಂಗವಾಗಿ ಸೋಮವಾರ ಗೋಧೂಳಿ ಸಮಯದಲ್ಲಿ ಅಪಾರ ಭಕ್ತ ಸಮೂಹದ ನಡುವೆ ಅದ್ದೂರಿ ಜೋಡಿ ರಥೋತ್ಸವಗಳು ನೆರವೇರಿದವು.

ಜಾತ್ರಾಮಹೋತ್ಸವದ ಅಂಗವಾಗಿ ಗ್ರಾಮದಲ್ಲಿ ಬೆಳಗಿನಿಂದಲೇ ಮಹಿಳೆಯರು, ಮಕ್ಕಳು ಹೊಸ ಉಡುಗೆ ತೊಟ್ಟು ತಂಡೋಪತಂಡವಾಗಿ ದಿಂಗಾಲೇಶ್ವರ ಮಠ ಮತ್ತು ಆಂಜನೇಯ ದೇವಸ್ಥಾನಕ್ಕೆ ಆಗಮಿಸಿದರು. ರಥಕ್ಕೆ ಉಡಿ ತುಂಬಿ, ಹೊಸ ವಸ್ತ್ರಾಭರಣಗಳನ್ನಿರಿಸಿ ಶೃದ್ಧಾ ಭಕ್ತಿಯಿಂದ ಪೂಜೆ ಸಲ್ಲಿಸಿದ ದೃಶ್ಯ ಕಂಡು ಬಂದಿತು. ಸಂಜೆ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಸಕಲ ವಾದ್ಯ ವೈಭವಗಳೊಂದಿಗೆ ರಥೋತ್ಸವ ನೆರವೇರಿತು. ಸೇರಿದ್ದ ಅಪಾರ ಭಕ್ತ ಸಮೂಹ ಭಕ್ತಿ-ಭಾವಗಳಿಂದ ಉತ್ತತ್ತಿ, ಹಣ್ಣುಗಳನ್ನು ತೇರಿಗೆ ಎಸೆದರು. ಗ್ರಾಮದ ಮುಖ್ಯ ಸ್ಥಳದಲ್ಲಿ ಶ್ರೀ ಆಂಜನೇಯ ಮತ್ತು ದಿಂಗಾಲೇಶ್ವರಮಠದ ರಥಗಳು ಸೇರಿದ ಸಂದರ್ಭದಲ್ಲಿ ಭಕ್ತರ ಘೋಷಣೆಗಳು ಮುಗಿಲು ಮುಟ್ಟಿತ್ತು.

ಶ್ರೀಮಠದಲ್ಲಿ ಪ್ರಾತಃಕಾಲ ಶ್ರೀ ಗುರು ದಿಂಗಾಲೇಶ್ವರರ ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ, ಷಟಸ್ಥಲ ಧ್ವಜಾರೋಹಣ ಕಾರ್ಯಕ್ರಮ ನೆರವೇರಿತು. ಮಂಗಳವಾರ ಸಂಜೆ 5ಕ್ಕೆ ಶ್ರೀ ಫಕೀರ ದಿಂಗಾಲೇಶ್ವರ ಜಗ್ಗುರುಗಳು ಕಡುಬಿನ ಕಾಳಗವನ್ನು ನೆರವೇರಿಸುವರು.

### ಗದಗ-ಬೆಟಗೇರಿಯಲ್ಲಿ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ರೋಡ್ ಶೋ

# ದೇಶದ ರಕ್ಷಣೆಗಾಗಿ ಬಿಜೆಪಿಗೆ ಮತ ಹಾಕಿ



■ವಿಜಯಸಾಕ್ಷಿ ಸುದ್ದಿ, ಗದಗ

ಈಗ ನಡೆಯುತ್ತಿರುವುದು ದೇಶದ ಚುನಾವಣೆ ಆಗಿರುವುದರಿಂದ ದೇಶದ ಭದ್ರತೆ ಹಾಗೂ ಸುರಕ್ಷತೆಯ ದೃಷ್ಟಿಯಿಂದ ಬಿಜೆಪಿಗೆ ಮತ ಹಾಕುವಂತೆ ಮಾಜಿ ಮುಖ್ಯಮಂತ್ರಿ ಹಾಗೂ ಗದಗ-ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಮನವಿ ಮಾಡಿದರು.

ಅವರು ಸೋಮವಾರ ಗದಗ ಬೆಟಗೇರಿ ನಗರದಲ್ಲಿ ರೋಡ್ ಶೋ ನಡೆಸಿ ಮತ ಯಾಚನೆ ನಡೆಸಿದರು. ನಂತರ ನೆರೆದಿದ್ದ ಜನಸ್ತೋಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರು ದೇಶದ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ. ಯಾರು ದೇಶಭಕ್ತರಿದ್ದಾರೆ. ಅವರು ದೇಶದ ಹಿತದೃಷ್ಟಿಯಿಂದ ಬಿಜೆಪಿಗೆ ಮತ ಹಾಕಿ ಎಂದು ಮನವಿ ಮಾಡಿದರು.

ಕೊವಿಡ್ ಸಂದರ್ಭದಲ್ಲಿ ಮೋದಿಯವರು ಎಲ್ಲರಿಗೂ ಲಸಿಕೆ ಕೊಡಿಸಿದರು. ಲಸಿಕೆ ಹಾಕಿಸಿದವರ ಋಣ ತೀರಿಸುವುದು ನಮ್ಮ ಧರ್ಮ. ಅವರ ಋಣ ತೀರಿಸಲು ಬಿಜೆಪಿಗೆ ಮತ ಹಾಕಬೇಕು. ಇದು ದೇಶದ ಭದ್ರತೆ, ಸುರಕ್ಷತೆಯ ಚುನಾವಣೆ ಇದನ್ನು ಮನೆ ಮನೆಗೆ ಹೋಗಿ ತಿಳಿಸಬೇಕು. ಈ ಭಾಗದಲ್ಲಿ ಕಳೆದ ಬಾರಿ ಶೇ 95%ರಷ್ಟು ಮತಗಳನ್ನು ಹಾಕಿದ್ದೀರಿ, ಈ ಬಾರಿಯೂ ಎಲ್ಲರೂ ಮನೆ ಮನೆಗೆ ಹೋಗಿ ಬಿಜೆಪಿಗೆ ಮತ ಹಾಕುವಂತೆ ತಿಳಿಸಬೇಕು ಎಂದು ಮನವಿ ಮಾಡಿದರು.

ರೋಡ್ ಶೋನಲ್ಲಿ ಚಿತ್ರನಟಿ ತಾರಾ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಸಚಿವರಾದ ಸಿ.ಸಿ.ಪಾಟೀಲ್, ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ ಪಾಲ್ಗೊಂಡಿದ್ದರು.

#### ನೇಕಾರರ ಧ್ವನಿಯಾಗಿ ಕೆಲಸ

ಗದಗ-ಬೆಟಗೇರಿಯಲ್ಲಿ ನೇಕಾರ ಸಮುದಾಯ ಹೆಚ್ಚಾಗಿದ್ದು, ನನಗೆ ನೇಕಾರರ ಸಮಸ್ಯೆ ಗೊತ್ತಿದೆ. ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ನೇಕಾರ ಸಮ್ಮಾನ್ ಯೋಜನೆ ಜಾರಿ ಮಾಡಿದ್ದೇನೆ. ನೇಕಾರರಿಗೆ 50 ಯುನಿಟ್ ವರೆಗೆ 10 ಎಚ್ ಪಿ ವರೆಗೂ ಉಚಿತ ವಿದ್ಯುತ್ ನೀಡಲಾಗಿದೆ.

ಬೆಟಗೇರಿಯಲ್ಲಿ ಬೃಹತ್ ನೇಕಾರರ ಹಬ್ ಮಾಡಿ ನೇಕಾರರ ಬದುಕನ್ನು ಹಸನು ಮಾಡಲು ಬದ್ದನಾಗಿದ್ದನೆ. ನಾವು ರೈತ ವಿದ್ಯಾನಿಧಿ ಯೋಜನೆಯನ್ನು ನೇಕಾರರ ಮಕ್ಕಳಿಗೆ ವಿದ್ಯಾನಿಧಿ ಮಾಡಿದ್ದೇವು. ಆದರೆ, ಕಾಂಗ್ರೆಸ್ ಸರ್ಕಾರ ಬಂದು ವಿದ್ಯಾನಿಧಿ ಯೋಜನೆ ನಿಲ್ಲಿಸಿದರು ಎಂದು ಹೇಳಿದರು. ಈ ಚುನಾವಣೆಯಲ್ಲಿ ಬಿಜೆಪಿಗೆ ಮತ ಹಾಕಿ ನನ್ನನ್ನು ಗೆಲ್ಲಿಸಿ ಕಳಿಸಿದರೆ, ಲೋಕಸಭೆಯಲ್ಲಿ ನಿಮ್ಮ ಪರವಾಗಿ ಸಿಂಹ ಘರ್ಜನೆ ಮಾಡುತ್ತೇನೆ. ಕ್ಷೇತ್ರದಲ್ಲಿ ನಿಮ್ಮ ಸೇವಕನಾಗಿ ಕೆಲಸ ಮಾಡುತ್ತೇನೆ ಎಂದು ಹೇಳಿದರು.


### 17, 18ನೇ ವಾರ್ಡ್‌ನಲ್ಲಿ ಸಚಿವ ಎಚ್.ಕೆ. ಪಾಟೀಲರಿಂದ ಮತಯಾಚನೆ

# ಕಾಂಗ್ರೆಸ್ ಪರ ಹೊಸ ಅಲೆ

■ವಿಜಯಸಾಕ್ಷಿ ಸುದ್ದಿ, ಗದಗ

ದಿ. ಪ್ರಧಾನಿ ಇಂದಿರಾ ಗಾಂಧಿ ಅವರು ಮೊಟ್ಟಮೊದಲ ಬಾರಿಗೆ ವೃದ್ಧಾಪ್ಯ ವೇತನ ಆರಂಭಿಸಿದರು. ಅಂದಿನಿಂದ ಇಂದಿಗೂ ಕೂಡ ವೃದ್ಧಾಪ್ಯ ವೇತನ ಮುಂದುವರಿದಿದ್ದು, ಬಡವರಿಗೆ ಆಧಾರವಾಗಿದೆ. ಇಂದಿರಾ ಗಾಂಧಿ ಅವರ ಮಾರ್ಗದರ್ಶನದಲ್ಲಿ ನಾವು ಮುಂದುವರಿಯುತ್ತಿದ್ದೇವೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 17 ಹಾಗೂ 18ನೇ ವಾರ್ಡಿನಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ಪ್ರತ್ಯೇಕ ಸಭೆಯಲ್ಲಿ ಮಾತನಾಡಿದ ಅವರು, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಬಡಜನರ ಆರ್ಥಿಕ ಸ್ಥಿತಿ ಸುಧಾರಿಸಿದ್ದು, ಮಹಿಳೆಯರು ಕೈಗಡ ಸಾಲ ಮಾಡುವುದನ್ನು ನಿಲ್ಲಿಸಿದ್ದಾರೆ. ಪ್ರತಿ ಮನೆಯ



ಮಹಿಳೆಯರು ಕಾಂಗ್ರೆಸ್ ಪರವಾಗಿದ್ದಾರೆ. ಮನೆ ಯಜಮಾನ ಯಾವ ಪಕ್ಷಕ್ಕೆ ಮತ ಹಾಕಿದರೂ, ಮಹಿಳೆಯರು ಮಾತ್ರ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಮತ ನೀಡುವುದಾಗಿ ತಿಳಿಸುತ್ತಿದ್ದಾರೆ. ಕಾಂಗ್ರೆಸ್ ಪರ ಹೊಸ ಅಲೆಯೊಂದು ಆರಂಭವಾಗಿದೆ ಎಂದರು.

ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, 17ನೇ ವಾರ್ಡಿನ ಸದಸ್ಯ ಮುನ್ನಾ ರೇಷ್ಮಿ, 18ನೇ ವಾರ್ಡಿನ ಸದಸ್ಯ ಜೂನಸಾಬ್ ನಮಾಜಿ ಮಾತನಾಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮೌಲಾನಾ, ಇಮಾಮಸಾಬ್ ಕಾಗದಗಾರ, ಮುಖಂಡರಾದ ಶಿವಮೂರ್ತಪ್ಪ ಅಗಸಿಮನಿ, ರಾಜು ಬದಿ, ರುಸ್ತುಂಸಾಬ್ ಪಠಾಣ, ಪ್ರೇಮನಾಥ ಗರಗ, ಮಲ್ಲೇಶ ಆದೋನಿ, ಮಂಜುನಾಥ ಅಗಸಿಮನಿ, ರಾಘವೇಂದ್ರ ರಾಂಪೂರ, ಗಂಗಾಧರ ನೆಳಗಾವಮಠ ಸೇರಿ ಅನೇಕರು ಇದ್ದರು.

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮಾತನಾಡಿ, ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ಈ ಭಾಗದಲ್ಲಿ ಮತಯಾಚನೆ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಬಡವರ ಆರ್ಥಿಕ ಸ್ಥಿತಿಯನ್ನು ಮೇಲೆತ್ತುವ ಕಾರ್ಯ ಮಾಡಲಾಗುತ್ತಿದೆ. ತಾವೆಲ್ಲರೂ ನನಗೆ ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

### 8ನೇ ವಾರ್ಡ್‌ನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಸಚಿವ ಎಚ್.ಕೆ. ಪಾಟೀಲ ಪ್ರಚಾರ

# ಗಡ್ಡದೇವರಮಠರ ಗೆಲುವಿಗೆ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ 8ನೇ ವಾರ್ಡಿನ ಮನೆ-ಮನೆಗಳಿಗೂ ಪಂಚ ಗ್ಯಾರಂಟಿಗಳನ್ನು ನೀಡಿದ್ದು, ಪ್ರತಿ ಮನೆಗೆ ತಿಂಗಳಿಗೆ 5000 ರೂ. ನಂತೆ ವಾರ್ಷಿಕ 60,000 ರೂ. ನೀಡುತ್ತಿದ್ದೇವೆ. ಇವೆಲ್ಲ ಅಂಶಗಳನ್ನು ಮಹಿಳೆಯರಿಗೆ ತಲುಪಿಸಿ, ಮುಂದಿನ ಗ್ಯಾರಂಟಿ ಯೋಜನೆಗಳ ಕಾರ್ಡ್‌ಗಳನ್ನು ತಲುಪಿಸಿ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಗೆಲುವಿಗೆ ಶ್ರಮಿಸಬೇಕು ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 8ನೇ ವಾರ್ಡಿನಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.



ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಬೆಟಗೇರಿ ಭಾಗದಲ್ಲಿ ದೇವಾಂಗ ಸಮಾಜದವರು, ನೇಕಾರರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಗ್ಯಾರಂಟಿ ಯೋಜನೆಗಳು ಅನುಷ್ಠಾನಗೊಂಡ ದಿನದಿಂದ ಪ್ರತಿ ಮನೆಯೊಳಗೆ ನಮ್ಮ ಹಿತೈಷಿಗಳಿದ್ದಾರೆ. ಪ್ರತಿ ಮನೆಯ ತಾಯಂದಿರಿಗೆ ಮಕ್ಕಳನ್ನು ಬದಲಾಯಿಸುವಷ್ಟು ಶಕ್ತಿಯಿದ್ದು, ಮಹಿಳೆಯರು ಆದಷ್ಟು ಪ್ರತಿ ಮನೆ ಮನೆಗಳಿಗೆ ಭೇಟಿ ನೀಡಿ ಗ್ಯಾರಂಟಿ ಯೋಜನೆಗಳ ಬಗ್ಗೆ ಮಾಹಿತಿ ನೀಡಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುವಂತೆ ಮನವೊಲಿಸಬೇಕು ಎಂದು ಹೇಳಿದರು.

ಮಹಾಭಾರತದಲ್ಲಿ ಭೀಮಾರ್ಜುನರು ಯುದ್ಧದಲ್ಲಿ ಗೆಲುವು ನಮ್ಮದೇ ಎನ್ನುತ್ತಿರುವ ಸಂದರ್ಭದಲ್ಲಿ ಗರ್ವಭಂಗವಾದ ರೀತಿಯಲ್ಲಿ ಕೇಂದ್ರ ಬಿಜೆಪಿ ಸರಕಾರದಲ್ಲಿನ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹಸಚಿವ ಅಮಿತ್ ಶಾ ಅವರ ಗರ್ವಭಂಗವಾಗಲಿದೆ ಎಂದು ಡಿ.ಆರ್. ಪಾಟೀಲ ಭವಿಷ್ಯ ನುಡಿದರು.

8ನೇ ವಾರ್ಡಿನ ನಗರಸಭೆ ಸದಸ್ಯೆ ಪೂರ್ಣಿಮಾ ಬರದ್ವಾಡ ಅಧ್ಯಕ್ಷತೆ ವಹಿಸಿದ್ದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮಲ್ಲೇಶಪ್ಪ ಬೆಲ್ಲದ, ಅರವಿಂದ ಹುಲ್ಲೂರ, ರಾಜೇಂದ್ರ ಬರದ್ವಾಡ, ಅಶೋಕ ಬಣ್ಣದ, ಗಿರಿಧರ ಬಟ್, ಮಹಮ್ಮದ್ ಶಾಲಗಾರ, ಗಣೇಶಸಿಂಗ್ ಬ್ಯಾಳಿ ಸೇರಿ ಅನೇಕರು ಇದ್ದರು.

### 10ನೇ ವಾರ್ಡ್‌ನಲ್ಲಿ ಸಚಿವ ಎಚ್.ಕೆ. ಪಾಟೀಲರಿಂದ ಮತಯಾಚನೆ

# ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿಗೆ ಮುನ್ನುಡಿಯಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ನಡೆಯುತ್ತಿರುವ ಲೋಕಸಭಾ ಚುನಾವಣೆಯು ಬದುಕು, ಭಾವನೆಗಳ ಮಧ್ಯೆ ಇರುವ ಚುನಾವಣೆ, ಸಂವಿಧಾನವನ್ನು ರಕ್ಷಣೆ ಮಾಡುವ ಚುನಾವಣೆ, ಎಲ್ಲರೂ ಕೂಡಿ ಇರುವ ಭ್ರಾತೃತ್ವ ಭಾವನೆ ಮೂಡಿಸುವ ಅತ್ಯಂತ ಮಹತ್ವದ ಚುನಾವಣೆಯಾಗಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 10ನೇ ವಾರ್ಡಿನಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಜನರ ಸ್ವಾಭಿಮಾನಕ್ಕೆ ಕೊರತೆ ಬರಬಾರದು ಎಂಬ ಸದಾಶಯದಿಂದ ವಿಧಾನಸಭೆ ಚುನಾವಣೆಗೂ ಮುನ್ನ ನೀಡಿದ್ದ ಪಂಚ ಗ್ಯಾರಂಟಿ ಭರವಸೆಗಳನ್ನು ಇಂದು ಸಂಪೂರ್ಣವಾಗಿ ಅನುಷ್ಠಾನ ಮಾಡಿದ್ದು, ವರ್ಷಕ್ಕೆ 58 ಸಾವಿರ ಕೋಟಿ ರೂ ಹಣ ಖರ್ಚು ಮಾಡಲಾಗುತ್ತಿದೆ. ಬಡತನ ರೇಖೆಗಿಂತ ಕಡಿಮೆ ಇದ್ದ 1.10 ಕೋಟಿ ಕುಟುಂಬಗಳನ್ನು ಆರ್ಥಿಕವಾಗಿ ಮೇಲೇತ್ತಲಾಗಿದೆ ಎಂದು ಹೇಳಿದರು.

2.5 ಕೋಟಿ ಮಹಿಳೆಯರು ಸಾರಿಗೆ ಬಸ್‌ನಲ್ಲಿ ಉಚಿತ ಪ್ರಯಾಣ ಮಾಡಿದ್ದಾರೆ. ಧರ್ಮಸ್ಥಳ ಸೇರಿ ರಾಜ್ಯದ ಇತರೆ ಧಾರ್ಮಿಕ ಕ್ಷೇತ್ರಗಳಿಗೆ ಭೇಡಿ ನೀಡಿದ ಮಹಿಳೆಯರು ಈ ಯೋಜನೆಗಳನ್ನು ಅನುಷ್ಠಾನಗೊಳಿಸಿದ ಕಾಂಗ್ರೆಸ್ ಸರಕಾರಕ್ಕೂ ಒಳ್ಳೆಯದಾಗಲಿ ಎಂದು ಬೇಡಿಕೊಳ್ಳುತ್ತಿರುವುದು ನಮ್ಮ ಗೆಲುವಿಗೆ ಭರವಸೆ ಮೂಡಿಸಿದೆ ಎಂದು ಹೇಳಿದರು.



ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಕೆ.ಎಚ್. ಪಾಟೀಲ ಅವರ ಕಾಲದಿಂದ ಇಂದಿನವರೆಗೂ ಈ ವಾಡ್‌ನ ಜನತೆ ಪಕ್ಷದ ಮೇಲೆ ಅದೇ ಪ್ರೀತಿ, ವಿಶ್ವಾಸ ಇಟ್ಟುಕೊಂಡಿದ್ದಾರೆ. ಪ್ರಸ್ತುತ ನಡೆಯುತ್ತಿರುವ ಲೋಕಸಭೆ ಚುನಾವಣೆಯಲ್ಲೂ ಕಾಂಗ್ರೆಸ್‌ಗೆ ಅಧಿಕ ಮತಗಳನ್ನು ನೀಡಿ ಆಶೀರ್ವದಿಸಬೇಕು ಎಂದು ಹೇಳಿದರು.

ಕಾಂಗ್ರೆಸ್ ಈಗಾಗಲೇ ಪ್ರತಿ ಮಹಿಳೆಗೆ ಪ್ರತಿವರ್ಷ 1 ಲಕ್ಷ ರೂ. ಅನುದಾನ ನೀಡುವ ಗ್ಯಾರಂಟಿ ಘೋಷಿಸಿದೆ. ಜೊತೆಗೆ ರೈತರ ಸಾಲಮನ್ನಾ ಮಾಡುವ ಗ್ಯಾರಂಟಿ ನೀಡಿದ್ದೇವೆ. ಪ್ರಧಾನಿ ನರೇಂದ್ರ ಮೋದಿ ಅವರು ಸೋಲಿನ ಹತಾಶೆಯಿಂದ ಮಾಂಗಲ್ಯ ಸೂತ್ರವನ್ನು ಬಿಚ್ಚಿ ಅಲ್ಪಸಂಖ್ಯಾತರಿಗೆ ನೀಡುತ್ತಾರೆ ಎಂಬ ಇಲ್ಲಸಲ್ಲದ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಆದ್ದರಿಂದ 10ನೇ ವಾರ್ಡಿನ ಜನತೆ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಗೆಲುವಿಗೆ ಮುನ್ನುಡಿಯಾಗಬೇಕು ಎಂದು ಹೇಳಿದರು.

10ನೇ ವಾರ್ಡಿನ ಸದಸ್ಯ ಇಮ್ತಿಯಾಜ್ ಶಿರಹಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿ, 10ನೇ ವಾರ್ಡಿನಲ್ಲಿ 800ಕ್ಕೂ ಹೆಚ್ಚು ಮನೆಗಳಿದ್ದು, ಗ್ಯಾರಂಟಿ ಯೋಜನೆಗಳ ಮೂಲಕ ಪ್ರತಿ ತಿಂಗಳಿಗೆ 15 ಲಕ್ಷ ರೂ. ಅನುದಾನ ಬರುತ್ತಿದೆ ಎಂದರು.

ಮುಖಂಡ ಅಜ್ಜನಗೌಡ ಹಿರೇಮನಿಪಾಟೀಲ ಮಾತನಾಡಿದರು. ಪ್ರಮುಖರಾದ ಅಸ್ಲಂ ಬಳ್ಳಾರಿ, ಜಿ.ಆರ್. ಕರಡಿ, ಮಲ್ಲಿಕಾರ್ಜುನ ಗದಗಿನ, ಬಸಪ್ಪ ಚಿಕ್ಕಣ್ಣವರ, ಜಹಾಂಗೀರ್ ಅಣ್ಣಿಗೇರಿ, ಇಬ್ರಾಹಿಂ ಶಿರಹಟ್ಟಿ, ಈಶ್ವರ ಗದಗಿನ, ಮಹಮ್ಮದ್ ಸಾಬ್ ಈಟಿ, ಜಾನಿಸಾಬ್ ಹಣಗಿ, ಇಮ್ತಿಯಾಜ್ ಮುಳಗುಂದ, ದ್ರಾಕ್ಷಾಯಿಣಿ ಕರಬಿಷ್ಟಿ, ಮಮ್ತಾಜ್ ಮಕಾಂದಾರ್, ಯಶೋಧ ಜಾಲಗಾರ, ಜಾಹೀರ್ ಟೋಪಿವಾಲೆ, ಗಿರಿಜವ್ವ ಬಾರಕೇರ, ಸುಷ್ಮಾ ಬಾರಕೇರ, ರೂಪಾ ಬಾರಕೇರ, ಸಾವಿತ್ರಿ ಬಾರಕೇರ, ಲಕ್ಷ್ಮೀ ರಾಂಪೂರ ಸೇರಿ ಅನೇಕರು ಇದ್ದರು.

## ಸಂಪಾದಕೀಯ

### ಮಾನಸಿಕವಾಗಿ ಕೊಲೆ ಮಾಡಿದ ಆರೋಪಿಗಳ ವಿರುದ್ಧವೂ ವ್ಯಕ್ತವಾಗಲಿ ಆಕ್ರೋಶ, ಸಹಾನುಭೂತಿ

ನೇಹಾ ಹಿರೇಮಠ ಕೊಲೆ ಪ್ರಕರಣವನ್ನು ಜನ ಇನ್ನು ಮರೆತಿಲ್ಲ. ಕೊಲೆ ಮಾಡಿದ ಆರೋಪಿ ವಿರುದ್ಧ ಜನಾಕ್ರೋಶ ಇನ್ನು ತಣ್ಣಗಾಗಿಲ್ಲ. ಜನರ ಭಾವನೆಯನ್ನು ಅರಿತು ಸರಕಾರ ಶೀಘ್ರವೇ ನೇಹಾ ಕೊಲೆ ಆರೋಪಿಗೆ ಕಠಿಣ ಶಿಕ್ಷೆ ಆಗುವಂತೆ ಮಾಡಬೇಕಿದೆ. ಆ ನಿಟ್ಟಿನಲ್ಲಿ ಪ್ರಯತ್ನಗಳು ನಡೆದಿದ್ದರೆ ಸ್ವಾಗತ. ಇಲ್ಲದಿದ್ದರೆ ಪ್ರಕರಣ ತ್ವರಿತ ಗತಿಯಲ್ಲಿ ನಡೆಯಬೇಕು ಎನ್ನುವುದು ಜನರ ಆಶಯ.

ನೇಹಾ ಹಿರೇಮಠ ಪ್ರಕರಣದಲ್ಲಿ ಆರೋಪಿ ಆಕೆಯನ್ನು ದೈಹಿಕವಾಗಿ ಕೊಲೆ ಮಾಡಿದ. ಭೌತಿಕವಾಗಿ ಆಕೆ ಇಲ್ಲದಂತೆ ಮಾಡಿದ. ನೇಹಾ ಹಿರೇಮಠ ಕುಟುಂಬವನ್ನು ದುಃಖದಲ್ಲಿ ಮುಳುಗುವಂತೆ ಮಾಡಿದೆ. ಆಕೆಯನ್ನು ಹತ್ತಿರದಿಂದ ಕಂಡ ಸ್ನೇಹಿತರು, ಸಂಬಂಧಿಗಳಿಗೂ ನೋವು ಉಂಟು ಮಾಡಿದೆ. ಅದಕ್ಕಾಗಿ ರಾಜ್ಯಾದ್ಯಂತ ಮಹಿಳೆಯರು ಒಗ್ಗಟ್ಟಾಗಿ ತಮ್ಮ ಆಕ್ರೋಶವನ್ನು ಹೊರಹಾಕಿದರು.

ಆದರೆ ಸದ್ಯ ಸಂಸದ ಪ್ರಜ್ವಲ್ ಅವರದು ಎನ್ನಲಾದ ಪ್ರಕರಣ ಬೆಳಕಿಗೆ ಬರುತ್ತಿದ್ದಂತೆ ಮಹಿಳೆಯರು, ಅನೇಕ ಸಂಘಟನೆಗಳು, ವಿದ್ಯಾರ್ಥಿ ಸಂಘಟನೆಗಳ ಮೌನ ವಹಿಸಿದ್ದು ಏಕೆ? ಸದ್ಯ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ಹತ್ತಾರು ಮಹಿಳೆಯರ ಬಗ್ಗೆ ಯಾಕೆ ಸಹಾನುಭೂತಿ ವ್ಯಕ್ತವಾಗುತ್ತಿಲ್ಲ. ಮಹಿಳೆಯರನ್ನು ಈ ರೀತಿ ನಡೆಸಿಕೊಂಡ ವ್ಯಕ್ತಿಯ ಬಗ್ಗೆ ಕನಿಷ್ಠ ಪ್ರತಿಭಟನೆ ದಾಖಲಿಸುವ ಸೌಜನ್ಯ ಇಲ್ಲದಿರುವುದು ನೋಡಿದರೆ ಹಿಂದಿನ ಹೋರಾಟಗಳ ಬಗ್ಗೆ ಅನುಮಾನ ಮೂಡುತ್ತದೆ.

ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ವೈರಲ್ ಆಗುತ್ತಿದ್ದಂತೆ ಸಂತ್ರಸ್ಥೆಯರು ಪೊಲೀಸರಿಗೆ ದೂರು ನೀಡಿದ್ದಾರೆ. ಯಾರದೋ ಒತ್ತಡಕ್ಕೆ ಮಣಿದು, ಮೋಸಕ್ಕೆ ಈಡಾಗಿರಬಹುದು. ಒಟ್ಟಾರೆ ಅವರು ಮಾಡಿದ್ದು ಸರಿಯೊ ತಪ್ಪು ಗೊತ್ತಿಲ್ಲ. ಆದರೆ ವಿಡಿಯೋ ಮೂಲಕ ಮಾನಸಿಕವಾಗಿ ಕೊಲೆಯಾದ ಮಹಿಳೆಯರ ಪರವಾಗಿ ಈಗ ಯಾಕೆ ಧ್ವನಿ ಎತ್ತುತ್ತಿಲ್ಲ?

ನೇಹಾ ಪ್ರಕರಣದಲ್ಲಿ ರಾಜಕೀಯ ಬೆರೆಸಿದ ಬಿಜೆಪಿ ನಾಯಕರು ಈಗ ಯಾಕೆ ಮೌನವಾಗಿದ್ದಾರೆ. ಮೈತ್ರಿ ಧರ್ಮ ಪಾಲನೆ ನೆಪದಲ್ಲಿ ಒಂದು ಕೋಮಿನ ವ್ಯಕ್ತಿಯ ವಿರುದ್ಧ ಮಾತಾಡದಂತೆ ಸ್ವಯಂ ನಿರ್ಬಂಧ ಹಾಕಿಕೊಂಡಿರುವಂತಿದೆ. ಒಂದು ವೇಳೆ ಪ್ರಜ್ವಲ್ ಮುಸ್ಲಿಂ ಆಗಿದ್ದರೆ ಪರಿಸ್ಥಿತಿ ಏನಾಗಿರುತ್ತಿತ್ತು ಊಹಿಸಿಕೊಳ್ಳಿ.

ಅವ್ವ ಸೇವಾ ಟ್ರಸ್ಟ್‌ನಿಂದ ಸನ್ಮಾನ ಸ್ವೀಕರಿಸಿದ ಶಾಸಕಿ ಲತಾ ಮಲ್ಲಿಕಾರ್ಜುನ

# ಸ್ತ್ರೀ ಸಬಲೀಕರಣಕ್ಕೆ ಸಮುದಾಯದ ವಿಶ್ವಾಸ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಮಹಿಳೆಯರಲ್ಲಿ ಬೌದ್ಧಿಕ, ರಾಜಕೀಯ, ಸಾಮಾಜಿಕ, ಆರ್ಥಿಕ ಬಲವನ್ನು ಹೆಚ್ಚಿಸುವುದಕ್ಕೆ ಸಂಘ ಸಂಸ್ಥೆಗಳಿಂದ, ಸರ್ವಧರ್ಮಗಳ ಸಮಾಜಗಳಿಂದ ನೀಡುವ ಸಹಕಾರ, ಗೌರವ ಸನ್ಮಾನಗಳ ಪಾತ್ರ ಸಾಕಷ್ಟು ಪರಿಣಾಮ ಬೀರುತ್ತದೆ. ಇಂದು ಅವ್ವ ಸೇವಾ ಟ್ರಸ್ಟ್‌ನವರು ನೀಡಿದ ಸನ್ಮಾನದಿಂದ ತಾಯಿ ಪ್ರೀತಿ ಸಿಕ್ಕಷ್ಟೇ ಖುಷಿಯಾಗಿದೆ ಎಂದು ಹರಪನಹಳ್ಳಿ ತಾಲೂಕಿನ ಪಕ್ಷೇತರ ಶಾಸಕಿ ಲತಾ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ಅವರು ಇಲ್ಲಿಯ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಮಠದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಗುರವ್ವ ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣೆಗಾಗಿ ಸ್ಥಾಪಿಸಿದ ದತ್ತಿನಿಧಿ ಕಾರ್ಯಕ್ರಮದಲ್ಲಿ ಜಂಗಮ ಪುಂಗವ ಅಲ್ಲಮ ಪ್ರಭುಗಳ, ಅಕ್ಕಮಹಾದೇವಿ ಜಯಂತಿ ಮತ್ತು ಶ್ರೀಮಠದ 9ನೇ ಪೀಠಾಧಿಪತಿಗಳ 57ನೇ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್, ಅನ್ನದಾನೀಶ್ವರ ಮಠ ಹಾಗೂ ಅಕ್ಕನ ಬಳಗದವರು ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಮಹಿಳೆ ಸಾಕಷ್ಟು ಸಬಲೀಕರಣ, ಸಶಕ್ತತೆ ಹೊಂದಬೇಕಾದರೆ ಎಲ್ಲ ಸಮುದಾಯದ ಪ್ರೀತಿ-ವಿಶ್ವಾಸ ಬೇಕಾಗುತ್ತದೆ. ಅಂದಾಗ ಅವಳಲ್ಲಿ ಮುನ್ನುಗ್ಗುವ ಛಲ, ಆತ್ಮ ವಿಶ್ವಾಸ, ಸಾಮರ್ಥ್ಯ ಹೆಚ್ಚಾಗುತ್ತದೆ. ಸ್ವಯಂ ನಿರ್ಧಾರ ತೆಗೆದುಕೊಳ್ಳುವಲ್ಲಿಯೂ ಅವಳು ಸಹಜವಾಗಿ ಮುಂದಾಗುತ್ತಾಳೆ. ನಾನು ಎರಡು ರಾಷ್ಟ್ರೀಯ ಪಕ್ಷಗಳ ಮಧ್ಯೆ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪಕ್ಷೇತರಳಾಗಿ ಗೆಲ್ಲಲು ಹರಪನಹಳ್ಳಿಯ ಜನ ತೋರಿದ ಪ್ರೀತಿ ವಿಶ್ವಾಸವೇ ಸಾಕ್ಷಿ. ಇವತ್ತಿನ ರಾಜಕೀಯ ವ್ಯವಸ್ಥೆಯಲ್ಲಿ ಮಹಿಳೆಯೊಬ್ಬಳು ಪಕ್ಷೇತರಳಾಗಿ ಗೆಲ್ಲುವುದು ಎಂದರೆ, ಇದೆಲ್ಲ ಹೆತ್ತವರ ಪ್ರೀತಿ, ಸಮಾಜ ತೋರಿದ ಸಹಕಾರದಿಂದ ಮಾತ್ರ ಸಾಧ್ಯವಾಯಿತು ಎಂದು ಹೇಳಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ ನಾಡೋಜ ಡಾ.ಅನ್ನದಾನೀಶ್ವರ ಶ್ರೀಗಳು ಆಶೀರ್ವಚನ ನೀಡಿ, ಎಲ್ಲರಿಗೂ ಒಳ್ಳೆಯದಾಗಲಿ ಎಂದು ಶುಭ ಕೋರಿದರು. ಘನ ಉಪಸ್ಥಿತಿ ವಹಿಸಿದ ಸಭಾಪತಿ ಬಸವರಾಜ ಹೊರಟ್ಟಿಯವರು ಅವ್ವ ಸೇವಾ ಟ್ರಸ್ಟ್ ನಡೆದು ಬಂದ ದಾರಿಯ ಕುರಿತು ಮಾತನಾಡಿದರು. ಈ ಸಂದರ್ಭದಲ್ಲಿ ಶಶಿ ಸಾಲಿ, ನಿವೃತ್ತ ಪ್ರಾ. ಕರಿಭರಮಗೌಡರ, ಡಾ. ಬಸವರಾಜ ಧಾರವಾಡ ಹಾಗೂ ಯು.ಪಿ.ಎಸ್.ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಎರಡನೇ ರ್‍ಯಾಂಕ್ ಪಡೆದ ಸೌಭಾಗ್ಯ ಬೀಳಗಿಮಠ ಮುಂತಾದವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಅಳವಂಡಿ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಮಹಾಲಿಂಗ ಸ್ವಾಮೀಜಿ, ಕರಬಸಪ್ಪ ಹಂಚಿನಾಳ, ಆರ್.ಬಿ. ಡಂಬಳಮಠ, ವೀರನಗೌಡ ಗುಡದಪ್ಪನವರ, ಆರ್.ಎಲ್. ಪೊಲೀಸ್‌ಪಾಟೀಲ, ಎಸ್.ಎಂ. ಅಗಡಿ, ಎಸ್.ಎಸ್. ಗಡ್ಡದ, ಎಸ್.ಪಿ. ನಿಂಬಿಮಠ, ಎಮ್.ಎಸ್. ಪೂಜಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಡಾ. ಬಿ.ಜಿ. ಜವಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಎಸ್. ಇನಾಮತಿ ನಿರೂಪಿಸಿದರು.




ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿಯವರು ಅತ್ಯಂತ ಹಿರಿಯ ಸದಸ್ಯರೆಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಅವರ ಅನುಭವ-ಮಾರ್ಗದರ್ಶನ ನನಗೆ ಸಾಕಷ್ಟು ಬೇಕಾಗಿದೆ. ಅವರು ಸ್ಥಾಪಿಸಿದ ಅವ್ವ ಸೇವಾ ಟ್ರಸ್ಟ್‌ನಿಂದ ಸನ್ಮಾನ ಪಡೆದಿದ್ದು ನನ್ನ ಭಾಗ್ಯವೆಂದೇ ಭಾವಿಸುತ್ತೇನೆ. ತಾಯಿ ಪ್ರೀತಿ ಸಿಕ್ಕಷ್ಟೇ ಖುಷಿಯಾಗಿದೆ. ಅದರ ಜೊತೆ-ಗೆ ಶ್ರೀಮಠ ಹಾಗೂ ಅಕ್ಕನ ಬಳಗದವರು ತೋರಿದ ಪ್ರೀತಿಯನ್ನು ನಾನು ಎಂದೂ ಮರೆಯಲಾರೆ. ಮಹಿಳೆಯರು ಯಾವುದಕ್ಕೂ ಹಿಂಜರಿಯದೇ ಎಲ್ಲ ಕ್ಷೇತ್ರಗಳಲ್ಲೂ ಪಾಲ್ಗೊಂಡು ಆಯಾ ಕ್ಷೇತ್ರಗಳಲ್ಲಿ ನಮ್ಮ ಸಾಮರ್ಥ್ಯ ತೋರಿಸಲು ಮುಂದಾಗಬೇಕು.

**– ಲತಾ ಮಲ್ಲಿಕಾರ್ಜುನ.**
ಹರಪನಹಳ್ಳಿ ಪಕ್ಷೇತರ ಶಾಸಕಿ.

## ಶ್ರೀ ಜಗದಂಬಾ ದೇವಿಯ ಪಾಲಕಿ ಉತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಮರಾಠಾ ವಿದ್ಯಾ ವರ್ಧಕ ಸಂಘದ ವತಿಯಿಂದ ಏಪ್ರಿಲ್ 30ರ ರಾತ್ರಿ 8 ಗಂಟೆಗೆ ಸಂತ ಮಂಡಳಿಯಿಂದ ಭಜನೆಯೊಂದಿಗೆ ಪಾಲಕಿ ಸೇವೆ, ಮಹಾಮಂಗಳಾರತಿ, ನಂತರ ಪ್ರಸಾದ ಸೇವೆ ಜರುಗುವದು.

ಈ ವಾರದ ಪಾಲಕಿ ಸೇವೆಯನ್ನು ಹುಡ್ಕೋ ಕಾಲೋನಿಯ ಹೇಮಲತಾ ಸಾರೆ ಇವರ ವತಿಯಿಂದ ನೆರವೇರಿಸಲಾಗುವದು. ಸಮಾಜ ಬಾಂಧವರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀದೇವಿಯ ಕೃಪೆಗೆ ಪಾತ್ರರಾಗಲು ಸಂಘದ ಅಧ್ಯಕ್ಷ ವಿನೀತಕುಮಾರ ವ್ಹಿ.ಜಗತಾಪ, ಗೌರವ ಕಾರ್ಯದರ್ಶಿ ಶಿವಾಜಿ ವಾಯ್.ಗ್ವಾರಿ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

## ಮತದಾನ ಮಾಡಿ, ಪ್ರಜಾಪ್ರಭುತ್ವ ಬಲಪಡಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹ ಭಾಗಿತ್ವ ಸಮಿತಿ (ಸ್ವೀಪ್) ಹಾಗೂ ವಿವಿಧ ಇಲಾಖೆಯ ಸಹಕಾರದಲ್ಲಿ 'ನಮ್ಮ ನಡೆ ಮತಗಟ್ಟೆ ಕಡೆಗೆ' ಕಾರ್ಯಕ್ರಮವು ಭಾನುವಾರ ನಡೆಯಿತು.

ನಗರದ ಭೂಮರಡ್ಡಿ ವೃತ್ತದಲ್ಲಿ ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಹಾಗೂ ಜಿ.ಪಂ ಸಿಇಒ ಭರತ್.ಎಸ್ ಅವರು ಕಾಲ್ನಡಿಗೆ ಜಾಥಾಗೆ ಚಾಲನೆ ನೀಡಿದರು. ಬಳಿಕ ಕೆ.ಎಚ್. ಪಾಟೀಲ ವೃತ್ತ, ಬಸವೇಶ್ವರ ವೃತ್ತ, ಟಾಂಗಾಕೂಟ ಮಾರ್ಗವಾಗಿ ವೀರನಾರಾಯಣ ದೇವಸ್ಥಾನದ ಮೂಲಕ ನಗರದ ಸರಕಾರಿ ಹೆಣ್ಣು ಮಕ್ಕಳ ಶಾಲೆಗೆ ತೆರಳಲಾಯಿತು.

ದಾರಿಯುದ್ದಕ್ಕೂ ಮತದಾನದ ಮಹತ್ವ ಕುರಿತು ಜಾಗೃತಿ ಮೂಡಿಸಲಾಯಿತು. ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಹಾಗೂ ಜಿ.ಪಂ ಸಿಇಒ ಭರತ್.ಎಸ್ ಸೇರಿದಂತೆ ನೂರಾರು ಜನರು ಕಾಲ್ನಡಿಗೆ ಮೂಲಕ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ನಂತರ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಚುನಾವಣಾ ಧ್ವಜಾರೋಹಣ ನೆರವೇರಿಸಿದರು. ಯುವ ಮತದಾರರನ್ನು ಆಕರ್ಷಿಸುವ ನಿಟ್ಟಿನಲ್ಲಿ ಅಭಿನಂದನಾ ಪ್ರಮಾಣ ನೀಡಲಾಯಿತು. ಚುನಾವಣಾ ರಾಯಭಾರಿ ಪ್ರೇಮಾ ಹುಚ್ಚಣ್ಣವರ, ಜಿ.ಪಂ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪ ನಿರ್ದೇಶಕರಾದ ಎಂ.ಎ. ರಡ್ಡೇರ, ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ರವಿ ಗುಂಜಿಕರ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ಶಾಲೆಯ ಮುಖ್ಯೋಪಾಧ್ಯಾಯ ಎಫ್.ಜೆ. ದಲಭಂಜನ್, ವಿವಿಧ ಇಲಾಖೆ ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

## ದ್ವಿತೀಯ ಪಿಯುಸಿ ಪರೀಕ್ಷೆ: ವಿದ್ಯಾರ್ಥಿಗಳಿಗೆ ಉಚಿತ ಪ್ರಯಾಣ

■ವಿಜಯಸಾಕ್ಷಿ ಸುದ್ದಿ, ಗದಗ

ದ್ವಿತೀಯ ಪಿ.ಯು.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಅವರ ವಿದ್ಯಾಸಂಸ್ಥೆಯ ಹೊರತಾಗಿ ಇತರೆ ವಿದ್ಯಾ ಸಂಸ್ಥೆಗಳಿಗೆ ಪರೀಕ್ಷಾ ಕೇಂದ್ರಗಳ ನಿಯೋಜನೆಯಾಗಿರುವುದರಿಂದ ವಿದ್ಯಾರ್ಥಿಗಳ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗಿದೆ.ದ್ವಿತೀಯ ಪಿ.ಯು.ಸಿ ಪರೀಕ್ಷೆ ನಡೆಯುವ ದಿನಾಂಕಗಳಂದು, ಎಪ್ರಿಲ್ 29 ರಿಂದ ಮೇ 16 ರವರೆಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ದ್ವಿತೀಯ ಪಿ.ಯು.ಸಿ ಪರೀಕ್ಷೆಯ ಪ್ರವೇಶ ಪತ್ರ ತೋರಿಸಿ ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ಹೋಗಲು ಹಾಗೂ ಪರೀಕ್ಷೆ ಮುಗಿಸಿ ವಾಸಸ್ಥಳಕ್ಕೆ ಹಿಂದಿರುಗಲು ಸಂಸ್ಥೆಯ ನಗರ, ಉಪನಗರ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣ ಮಾಡಬಹುದಾಗಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

# ಮತದಾನ ಜಾಗೃತಿ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮತದಾರರಲ್ಲಿ ಮತದಾನದ ಮಹತ್ವ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಅಡವಿಸೋಮಾಪೂರ ಸಣ್ಣ ತಾಂಡೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಆವರಣದ ಮತಗಟ್ಟೆಯಲ್ಲಿ ಚುನಾವಣಾ ಧ್ವಜಾರೋಹಣವನ್ನು ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್. ನೆರವೇರಿಸಿದರು.

ನಮ್ಮ ನಡೆ ಮತಗಟ್ಟೆ ಕಡೆ, ಮತದಾನ ಮಾಡಿದವನೇ ಹೀರೋ, ಮತದಾನ ನಮ್ಮ ಹಕ್ಕು ಇತ್ಯಾದಿ ಘೋಷವಾಕ್ಯಗಳ ಮೂಲಕ ಮತದಾನದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಗ್ರಾಮದ ವ್ಯಾಪ್ತಿಯಲ್ಲಿ ಸಂಚರಿಸಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.



ಶಾಲೆಯ ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಪಿ.ಬಿ. ಕಿಲಬನವರ, ಮಾರುತಿ ಪವಾರ, ವೆಂಕಟೇಶ್ ಲಮಾಣಿ, ಹನುಮಂತ ಲಮಾಣಿ, ಲಕ್ಷ್ಮಣ ಲಮಾಣಿ, ಸೋಮನಾಥ ಲಮಾಣಿ, ಮೌನೇಶ್ ಲಮಾಣಿ, ಬಿಸಿಯೂಟ ಸಿಬ್ಬಂದಿಗಳಾದ ಗಂಗವ್ವ ಲಮಾಣಿ, ಸವಿತಾ ಪವಾರ, ದೇವಲೆಪ್ಪ ಲಮಾಣಿ, ರೇವಪ್ಪ ಲಮಾಣಿ, ಉಮೇಶ ಲಮಾಣಿ, ಸೋಮನಾಥ ರಾಠೋಡ, ಸೀತವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ, ಲಕ್ಷ್ಮೀ ಲಮಾಣಿ, ಮೀರವ್ವ ಪವಾರ, ಶಾಂತವ್ವ ರಾಠೋಡ, ಲಕ್ಷ್ಮೀ ಲಮಾಣಿ, ರೇಣುಕಾ ಲಮಾಣಿ, ಗೀತಾ ರಾಠೋಡ ಸೇರಿದಂತೆ ಶಾಲಾ ಮಕ್ಕಳು ಇದ್ದರು.

## ಕೇಂದ್ರದಿಂದ ಶಾಶ್ವತ ಗ್ಯಾರಂಟಿ ಯೋಜನೆಗಳು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಧಾನಿ ನರೇಂದ್ರ ಮೋದಿಯವರು ಅಸಾಧ್ಯವನ್ನು ಸಾಧ್ಯ ಮಾಡಿದ್ದಾರೆ. ಜಲಜೀವನ ಮಿಷನ್ ಯೋಜನೆಯಿಂದ ದೇಶದ ಪ್ರತಿ ಮನೆಗೂ ನಳದ ನೀರು ಬರುವಂತೆ ಮಾಡಿದ್ದಾರೆ. ನಮ್ಮ ಅವಧಿಯಲ್ಲಿ ರಾಜ್ಯದಲ್ಲಿ ಸುಮಾರು 75 ಲಕ್ಷ ಮನೆಗಳಿಗೆ ನಲ್ಲಿ ನೀರಿನ ಸಂಪರ್ಕ ಕಲ್ಪಿಸಲಾಗಿದೆ. ಸೂರಿಲ್ಲದ ಬಡವರಿಗೆ ಶಾಶ್ವತ ಮನೆ ನಿರ್ಮಾಣ, ಮನೆಗಳಿಗೆ ಉಜ್ವಲ ಗ್ಯಾಸ್, ಶೌಚಾಲಯ ನಿರ್ಮಾಣ ಮಾಡುವ ಮೂಲಕ ಶಾಶ್ವತ ಗ್ಯಾರಂಟಿಗಳನ್ನು ನೀಡಿದ್ದಾರೆ. ಮೋದಿಯವರು ಮುಂದಿನ ಐದು ವರ್ಷ ಮತ್ತೆ ಪ್ರಧಾನಿಯಾದರೆ ಬಡತನ ಮುಕ್ತ ಭಾರತ ಮಾಡುತ್ತಾರೆ ಎಂದು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕಿನ ಅಡರಕಟ್ಟಿ, ಗೊಜನೂರು ಗ್ರಾಮಗಳಲ್ಲಿ ರೋಡ್‌ಶೋ ಮೂಲಕ ಚುನಾವಣಾ ಪ್ರಚಾರ ಕೈಗೊಂಡು ಮಾತನಾಡಿದರು.

ನಮ್ಮ ಅವಧಿಯಲ್ಲಿ ಪ್ರವಾಹ ಬಂದಾಗ ನಾವು ಒಂದೇ ತಿಂಗಳಲ್ಲಿ 17 ಲಕ್ಷ ರೈತರಿಗೆ ನೇರವಾಗಿ ಅವರ ಖಾತೆಗೆ ಪರಿಹಾರದ ಮೊತ್ತ ಜಮೆ ಮಾಡಿದ್ದೆವು. ಕಾಂಗ್ರೆಸ್‌ನವರು ಹತ್ತು ತಿಂಗಳು ಕಳೆದಿದ್ದರೂ, ಸರಿಯಾಗಿ ಪರಿಹಾರ ನೀಡಿಲ್ಲ. ರೈತರಿಗೆ ಪರಿಹಾರವಾಗಿ 2 ಸಾವಿರ ರೂಪಾಯಿ ಭಿಕ್ಷೆ ನೀಡಿದಂತೆ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಈ ಬಾರಿ ದೇಶಾದ್ಯಂತ ಶೇ.90ರಷ್ಟು ಜನರ ಮನಸ್ಸಿನಲ್ಲಿ ಮೋದಿ ಇದ್ದಾರೆ. ಅವರ ಋಣ ತೀರಿಸಲು ಎಲ್ಲರೂ ಬಿಜೆಪಿಗೆ ಆಶೀರ್ವಾದ ಮಾಡಿದರೆ, ದೇಶದಲ್ಲಿ ಮತ್ತೆ ಬಿಜೆಪಿಯ ಕಮಲದ ಹೂ ಅರಳಲಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಸಂಸದ ಪ್ರತಾಪ್ ಸಿಂಹ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಸುನಿಲ ಮಹಾಂತಶೆಟ್ಟರ, ಪ್ರವೀಣ ಬಾಳಿಕಾಯಿ ಸೇರಿದಂತೆ ಮತ್ತಿತರ ನಾಯಕರು ಹಾಜರಿದ್ದರು.

# ಮತದಾನ ಜಾಗೃತಿಗಾಗಿ ಕಾಲ್ನಡಿಗೆ ಜಾಥಾ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಾ ಸ್ವೀಪ್ ಸಮಿತಿ ವತಿಯಿಂದ ತಾಲೂಕಾ ಸ್ವೀಪ್ ಸಮಿತಿ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ 'ನಮ್ಮ ನಡೆ-ಮತಗಟ್ಟೆ ಕಡೆ' ಕಾರ್ಯಕ್ರಮದಡಿ ಕಾಲ್ನಡಿಗೆ ಜಾಥಾ ಹಮ್ಮಿಕೊಳ್ಳಲಾಗಿತ್ತು.



ಜಾಥಾಗೆ ತಹಸೀಲ್ದಾರ ಧನಂಜಯ ಮಾಲಗತ್ತಿ ಅವರ ಜೊತೆ ಜಂಟಿಯಾಗಿ ಚಾಲನೆ ನೀಡಿ ಮಾತನಾಡಿದ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಾಲೂಕಾ ಸ್ವೀಪ್ ಸಮಿತಿ ಅಧ್ಯಕ್ಷ ವಿಶ್ವನಾಥ ಹೊಸಮನಿ, ಕಳೆದ ಚುನಾವಣೆಯಲ್ಲಿ ಪಟ್ಟಣದ ಕೋಟೆಭಾಗದ 43, 44, 45, 46, 47ನೇ ಮತಗಟ್ಟೆಗಳಲ್ಲಿ ಕಡಿಮೆ ಮತದಾನವಾಗಿದೆ. ಮೇ 7ರಂದು ನಡೆಯುವ ಲೋಕಸಭೆ ಚುನಾವಣೆಗೆ ಒಟ್ಟಾರೆ ನೂರಕ್ಕೆ ನೂರರಷ್ಟು ಮತದಾನವಾಗಬೇಕು ಎಂದರು.

ಕೋಟೆಭಾಗದ ಸ.ಹಿ.ಪ್ರಾ ಶಾಲೆಯಲ್ಲಿ ಚುನಾವಣಾ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ತಹಸೀಲ್ದಾರ ಧನಂಜಯ ಮಾಲಗತ್ತಿ, ಮತದಾನ ಪ್ರಮಾಣದ ಹೆಚ್ಚಳಕ್ಕೆ ಈ ಸಾರಿ ಮುಂಡರಗಿ ಪಟ್ಟಣದ ಎಲ್ಲ ಮತಗಟ್ಟೆ ಹಾಗೂ ಕಡಿಮೆ ಮತದಾನವಾದ ತಾಲೂಕಿನ ಗ್ರಾಮಗಳಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದೆಂದು ತಿಳಿಸಿದರು.

ಇದೇ ವೇಳೆ ಮತದಾನ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಪುರಸಭೆ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ, ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ತಾ.ಪಂ ಸಿಬ್ಬಂದಿಗಳು ಸೇರಿದಂತೆ ವಿವಿಧ ಸರಕಾರಿ ನೌಕರ ಸಂಘಟನೆಯ ಪದಾಧಿಕಾರಿಗಳು ಇದ್ದರು.

# ಆರೋಗ್ಯ-ಕುಟುಂಬ ಕಲ್ಯಾಣ ಇಲಾಖೆ ತಂಡಕ್ಕೆ ಜಯ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹಭಾಗಿತ್ವ ಸಮಿತಿ (ಸ್ವೀಪ್) ವತಿಯಿಂದ ಟೆನ್ನಿಸ್ ಬಾಲ್ ಕ್ರಿಕೆಟ್ ಅಂತಿಮ ಪಂದ್ಯವು ಭಾನುವಾರ ನಡೆಯಿತು.



ನಗರದ ವಿಡಿಎಸ್ ಮೈದಾನದಲ್ಲಿ ನಡೆದ ಪಂದ್ಯಾವಳಿಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿಗಳ ನಡುವೆ ಅಂತಿಮ ಸ್ಪರ್ಧೆ ನಡೆಯಿತು. ಮೊದಲು ಬ್ಯಾಟ್ ಮಾಡಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಂಡದವರು 10 ಓವರಿಗೆ 6 ವಿಕೆಟ್ ನಷ್ಟಕ್ಕೆ 101 ರನ್ ಗಳಿಸಿ ರೋಚಕ ಜಯಗಳಿಸಿದರು.

ಶಿಕ್ಷಣ ಇಲಾಖೆಯ ತಂಡದವರು 10 ಓವರಿಗೆ 3 ವಿಕೆಟ್ ನಷ್ಟಕ್ಕೆ 94 ರನ್ ಗಳಿಸಿದರು. ಅಂತಿಮ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಚಾಲನೆ ನೀಡಿದರು. ಜಿ.ಪಂ ಸಿಇಒ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷ ಭರತ್.ಎಸ್ ಅವರು ಪಾರಿತೋಷಕ ಹಾಗೂ ಪ್ರಶಸ್ತಿಪತ್ರ ವಿತರಿಸಿದರು.

ಜಿ.ಪಂ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ರವಿ ಗುಂಜಿಕರ ಇತರರು ಇದ್ದರು.

## ಚುನಾವಣಾ ಜಾಹೀರಾತು: ಪೂರ್ವಾನುಮತಿ ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲುಸ್ತುವಾರಿ ಸಮಿತಿಯಿಂದ (ಎಂಸಿಎಂಸಿ) ವಿವಿಧ ಮಾಧ್ಯಮಗಳಲ್ಲಿ ದಿನನಿತ್ಯ ಪ್ರಸಾರವಾಗುವ ರಾಜಕೀಯ ಜಾಹೀರಾತುಗಳ ಬಗ್ಗೆ ನಿಗಾ ವಹಿಸಲಾಗಿದೆ.

ಆ ದಿಸೆಯಲ್ಲಿ ವಿದ್ಯುನ್ಮಾನ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಎಂಸಿಎಂಸಿ ಸಮಿತಿಯ ಅನುಮತಿಯಿಲ್ಲದೆ ಚುನಾವಣಾ ರಾಜಕೀಯ ಜಾಹೀರಾತು ಪ್ರಕಟಿಸುವಂತಿಲ್ಲ, ಎಂಸಿಎಂಸಿ ಸಮಿತಿಯ ಪೂರ್ವಾನುಮತಿ ಪಡೆದು ರಾಜಕೀಯ ಜಾಹೀರಾತು ಪ್ರಕಟಿಸಬೇಕು.

ವಿದ್ಯುನ್ಮಾನ ಮಾಧ್ಯಮ (ಎಲೆಕ್ಟ್ರಾನಿಕ್) ಗಳಾದ ಟಿ.ವಿ, ರೇಡಿಯೋ, ಮೊಬೈಲ್ ಸಂದೇಶ, ಧ್ವನಿ ಮುದ್ರಿತ ಸಂದೇಶಗಳು, ಬಲ್ಕ್ ಎಸಎಂಎಸ್ ಹಾಗೂ ಸಾಮಾಜಿಕ ಜಾಲತಾಣಗಳಾದ, ಫೇಸ್‌ಬುಕ್, ಎಕ್ಸ್, ಇನ್ಸ್ಟಾಗ್ರಾಂ ಗಳಲ್ಲಿ ಪ್ರಚಾರ ಕೈಗೊಳ್ಳುವವರು ಎಂಸಿಎಂಸಿ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ.

ಮುದ್ರಣ ಮಾಧ್ಯಮಕ್ಕೆ ಸಂಬಂಧಿಸಿದಂತೆ ಮತದಾನದ ಪೂರ್ವ ದಿನವಾದ ಮೇ 6 ಮತ್ತು ಮತದಾನ ದಿನವಾದ ಮೇ 7 ರಂದು ಚುನಾವಣಾ ರಾಜಕೀಯ ಜಾಹೀರಾತು ಪ್ರಕಟಿಸಲು ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ. ಆ ನಿಟ್ಟಿನಲ್ಲಿ ಮೇ 4 ಅಥವಾ ಮೇ 5 ರ ಮಧ್ಯಾಹ್ನ 3 ಗಂಟೆಯೊಳಗೆ ಅನುಮತಿ ಪಡೆಯಲು ಕೋರಿದೆ. ಅಭ್ಯರ್ಥಿಗಳು ಅಥವಾ ರಾಜಕೀಯ ಪಕ್ಷಗಳು ಚುನಾವಣಾ ರಾಜಕೀಯ ಜಾಹೀರಾತು ಪ್ರಸಾರ/ ಪ್ರಕಟಣೆಗೆ ನಿಗದಿತ ನಮೂನೆಯಲ್ಲಿ ಎಂಸಿಎಂಸಿ ಸಮಿತಿಗೆ ಅರ್ಜಿ ಸಲ್ಲಿಸಿ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಯುವ ಚೈತನ್ಯ ಸಮಾವೇಶ

# ಬಡತನ ನಿರ್ಮೂಲನೆಗಾಗಿ ಕಾಂಗ್ರೆಸ್‌ನ್ನು ಬೆಂಬಲಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವಕರೆಲ್ಲರೂ ದೇಶದ ಉಳಿವಿಗಾಗಿ, ಬಡತನದ ನಿರ್ಮೂಲನೆಗಾಗಿ, ಉದ್ಯೋಗ ಸೃಷ್ಟಿಗಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವ ಮೂಲಕ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಅತ್ಯಧಿಕ ಮತಗಳನ್ನು ನೀಡಿ ದೆಹಲಿಗೆ ಕಳುಹಿಸಬೇಕು ಎಂದು ರಾಷ್ಟ್ರೀಯ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ವಿ. ಶ್ರೀನಿವಾಸ್ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ 'ಯುವ ಚೈತನ್ಯ' ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಮೇ 7ರಂದು ನಡೆಯುವ ರಾಜ್ಯದ 14 ಕ್ಷೇತ್ರಗಳ ಚುನಾವಣೆಯಲ್ಲಿ 10ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ. ಆನಂದಸ್ವಾಮಿ ಗಡ್ಡದೇವರಮಠರ ಗೆಲುವಿಗಾಗಿ ಯುವಕರು ಮನೆಮನೆಗಳಿಗೆ ತೆರಳಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಮತ ಹಾಕಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಎಚ್.ಕೆ. ಪಾಟೀಲ ಅವರ ಸಾರಥ್ಯದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆ ನಡೆಯುತ್ತಿದ್ದು, ಆನಂದಸ್ವಾಮಿ ಗಡ್ಡದೇವರಮಠ ಅವರು ಗೆಲ್ಲಬೇಕು. ಕಾರ್ಯಕರ್ತರು ಎಚ್ಚರ ವಹಿಸಿ ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿಗೆ ಶ್ರಮಿಸಬೇಕು ಎಂದು ಮನವಿ ಮಾಡಿದರು.



ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮಾತನಾಡಿ, ಜಿಲ್ಲಾ ಯುವ ಕಾಂಗ್ರೆಸ್‌ನಿಂದ ಬೆಳೆದ ಯುವಕರು ರಾಷ್ಟ್ರಮಟ್ಟದ ನಾಯಕರಾಗಿ ಹೊರಹೊಮ್ಮಿದ್ದಾರೆ. ಭವಿಷ್ಯವನ್ನು ರೂಪಿಸಿಕೊಳ್ಳಲು ಯುವಕರಿಗೆ ಅವಕಾಶ ಮಾಡಿಕೊಡುವ ಏಕೈಕ ಪಕ್ಷ ಕಾಂಗ್ರೆಸ್ ಆಗಿದೆ ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್, ರಾಜ್ಯ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಹಮ್ಮದ್ ನಲಪಾಡ್, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ನಿರುದ್ಯೋಗ, ಬಡತನ ಸಮಸ್ಯೆ ನಿವಾರಿಸಲು ಪ್ರತಿಯೊಬ್ಬರೂ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಜಿಲ್ಲಾ ಮಹಿಳಾ ಕಾಂಗ್ರೆಸ್ ಘಟಕದ ಅಧ್ಯಕ್ಷೆ ನೀಲಮ್ಮ ಬೋಳನವರ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ, ಜಿಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಗದಗ-ಬೆಟಗೇರಿ ನಗರಸಭೆ ಮಾಜಿ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಪೀರಸಾಬ್ ಕೌತಾಳ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಎಐಸಿಸಿ ಕಾರ್ಯದರ್ಶಿ ವಿವೇಕ ಯಾವಗಲ್, ನಗರಸಭೆ ಸದಸ್ಯರು ಹಾಗೂ ಮುಖಂಡರು, ಕಾರ್ಯಕರ್ತರು ಇದ್ದರು.

ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಸ್ವಾಗತಿಸಿದರು. ಬಾಹುಬಲಿ ಜೈನರ ನಿರೂಪಿಸಿದರು.

ರಾಜಕಾರಣ ಎಂದರೆ ಮೋಜು, ಮಜಾ ಮಾಡುವುದಲ್ಲ. ಜನರ ಸೇವೆ ಮಾಡಲು ರಾಜಕಾರಣ ಒಂದು ಅಸ್ತ್ರವಾಗಿದ್ದು, ಅದನ್ನು ಸರಿಯಾಗಿ ಬಳಸಿಕೊಳ್ಳಬೇಕು. ಯುವಕರ ಹುರುಪು, ಉತ್ಸಾಹ ನೋಡಿ ನಮ್ಮಲ್ಲಿ ಸಂತೋಷ ಹೆಚ್ಚಿಸಿದೆ. ಯುವಕರ ಉತ್ಸಾಹ, ಆಸಕ್ತಿ ಸದಾವಕಾಲ ಹೀಗೆಯೇ ಇರಬೇಕು. ಅಂದಾಗ ಮಾತ್ರ ನಿಮಗೆ ಉಜ್ವಲ ಭವಿಷ್ಯ ದೊರೆಯಲಿದೆ.

– ಎಚ್.ಕೆ. ಪಾಟೀಲ.
ಜಿಲ್ಲಾ ಉಸ್ತುವಾರಿ ಸಚಿವರು.

## ಲಕ್ಕುಂಡಿಯಲ್ಲಿ ಮತದಾನ ಜಾಗೃತಿ ಜಾಥಾ




■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಗ್ರಾಮ ಪಂಚಾಯಿತಿ ಸ್ವೀಪ್ ಸಮಿತಿಯು ಲೋಕಸಭಾ ಚುನಾವಣೆಯ ಕುರಿತು ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಆಶ್ರಯದಲ್ಲಿ ನಡೆದ ಮತದಾನ ಜಾಗೃತಿ ಜಾಥಾ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಗ್ರಾಮ ಪಂಚಾಯಿತಿ ಅಧಿಕಾರಿಗಳು, ಶಿಕ್ಷಕರು, ಗ್ರಾ.ಪಂ ಸಿಬ್ಬಂದಿ ವರ್ಗದವರು ಜಾಥಾದಲ್ಲಿ ಪಾಲ್ಗೊಂಡು ಜಾಗೃತಿ ಮೂಡಿಸಿದರು.

ಪ್ರಮುಖ ಸ್ಥಳದಲ್ಲಿ ನೆರೆದಿದ್ದ ಮತದಾರರಿಗೆ ಮತದಾನ ಮಾಡುವ ಬಗ್ಗೆ ತಿಳುವಳಿಕೆ ನೀಡಿದರು. ಇದಕ್ಕೂ ಪೂರ್ವ ಗ್ರಾ.ಪಂ ಎದುರು ಸ್ವಿಪ್ ಧ್ವಜಾರೋಹಣವನ್ನು ಶಿಕ್ಷಕಿ ಅಂಜನಾ ಕರಿಯಲ್ಲಪ್ಪನವರ ನೆರವೇರಿಸಿದರು. ನಂತರ ಪ್ರತಿಜ್ಞಾ ವಿಧಿ ಭೋಧಿಸಲಾಯಿತು. ಅಭಿವೃದ್ಧಿ ಅಧಿಕಾರಿ ರಾಜಕುಮಾರ ಭಜಂತ್ರಿ, ಕಾರ್ಯದರ್ಶಿ ತುಕಾರಾಮ ಹುಲಗಣ್ಣವರ, ಗ್ರಂಥಾಲಯ ಮೇಲ್ವಿಚಾರಕ ಅಶೋಕ ಮುಸ್ಕಿನಭಾವಿ, ಪ್ರಾಥಮಿಕ ಶಾಲೆಯ ಶಿಕ್ಷಕರು ಸೇರಿದಂತೆ ಸಿಬ್ಬಂದಿಗಳು ಹಾಜರಿದ್ದರು.

ಕ್ರಾಂತಿ ಸೇನಾ ಮಹಿಳಾ ಉಪಾಧ್ಯಕ್ಷೆ

## ಪೂಜಾ ಬೇವೂರ್ ರಾಜೀನಾಮೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕ್ರಾಂತಿ ಸೇನಾ ಸಂಘಟನೆಯ ಮಹಿಳಾ ಉಪಾಧ್ಯಕ್ಷರ ಸ್ಥಾನಕ್ಕೆ ಪೂಜಾ ಬೇವೂರ್ ಕಾರಣಾಂತರಗಳಿಂದ ರಾಜೀನಾಮೆ ನೀಡಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಕ್ರಾಂತಿ ಸೇನಾ ಗದಗ ಜಿಲ್ಲಾ ಮಹಿಳಾ ಅಧ್ಯಕ್ಷೆ ರಾಣಿ ಚಂದಾವರಿ, ಮಹಿಳಾ ಪ್ರಧಾನ ಕಾರ್ಯದರ್ಶಿ ನಿಖಿತಾ ಸುತಾರ್, ಮಹಿಳಾ ಕಾರ್ಯದರ್ಶಿ ಮಹಾನಂದಾ ಪತ್ತಾರ್, ಮಹಿಳಾ ಗೌರವ ಕಾರ್ಯದರ್ಶಿ ರೇಣುಕಾ ಕಬಾಡಿ ಹಾಗೂ ಮಹಿಳಾ ಕಾರ್ಯಕರ್ತರ ಸಮ್ಮುಖದಲ್ಲಿ ರಾಜೀನಾಮೆ ನೀಡಿದ್ದಾರೆ.

## ಕಾಂಗ್ರೆಸ್ ಸೇರಿದ ಜೆಡಿಎಸ್ ಮುಖಂಡರು



■ ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿಯೊಂದಿಗಿನ ಅಪವಿತ್ರ ಮೈತ್ರಿಯ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಜೆಡಿಎಸ್‌ನ ಹಲವು ಸ್ಥಳೀಯ ನಾಯಕರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು. ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ನಗರದ ವಾರ್ಡ್ ನಂಬರ್ 17 ಮತ್ತು 18ರಲ್ಲಿ ನಡೆದ ಚುನಾವಣೆ ಪ್ರಚಾರದ ವೇಳೆ ಅನೇಕ ಜೆಡಿಎಸ್ ನಾಯಕರು, ಕಾರ್ಯಕರ್ತರು ಕಾಂಗ್ರೆಸ್‌ಗೆ ಸೇರ್ಪಡೆಯಾಗುವ ಮೂಲಕ ಗಡ್ಡದೇವರಮಠ ಅವರನ್ನು ಬೆಂಬಲಿಸಿದರು. ನಂತರ ವಾರ್ಡ್‌ನಲ್ಲಿ ಮನೆಮನೆಗೆ ತೆರಳಿ ಗಡ್ಡದೇವರಮಠ ಪರವಾಗಿ ಪ್ರಚಾರ ಕೈಗೊಂಡು, ಮತಯಾಚಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ತಿನ ಮುಖ್ಯ ಸಚೇತಕ ಹಾಗೂ ಕೆಪಿಸಿಸಿ ಕಾರ್ಯದರ್ಶಿ ಸಲೀಂ ಅಹಮ್ಮದ್, ಆನಂದಸ್ವಾಮಿ ಗಡ್ಡದೇವರಮಠ, ನಗರಸಭೆ ಸದಸ್ಯರಾದ ಜೂನ್‌ಸಾಬ ನಮಾಜಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಇಂದು ಸ್ವೀಪ್ ಜಾಥಾ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧಿಸಿದಂತೆ ಮತದಾರರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಸ್ವೀಪ್ ವತಿಯಿಂದ ಜಾಥಾ ಕಾರ್ಯಕ್ರಮವು ಎಪ್ರಿಲ್ 30 ರಂದು ಸಂಜೆ 4 ಗಂಟೆಗೆ ನಡೆಯಲಿದೆ.

ಜಾಥಾ ಕಾರ್ಯಕ್ರಮವು ಗದಗ ಬೆಟಗೇರಿಯ ಅಂಬಾಭವಾನಿ ವೃತ್ತದಿಂದ ಕುರಟ್ಟಿಪೇಟೆ, ಬಸ್ ನಿಲ್ದಾಣ, ಮಂಜುನಾಥ ನಗರ, ಹುಯಿಲಗೋಳ ರಸ್ತೆ ಮಾರ್ಗವಾಗಿ ತಾರಾಲಯದವರೆಗೆ ನಡೆಯಲಿದೆ.

ಈ ಜಾಥಾ ಕಾರ್ಯಕ್ರಮದಲ್ಲಿ ಬೈಕ್ ರ್‍ಯಾಲಿ, ನಾನಾ ಕಲಾ ತಂಡಗಳಿಂದ ಕಲಾ ಪ್ರದರ್ಶನ, ವಿದ್ಯಾರ್ಥಿಗಳ ವೇಷಭೂಷಣಗಳ ಮೂಲಕ ಮತದಾರರಲ್ಲಿ ಜಾಗೃತಿ ಮೂಡಿಸಲಾಗುತ್ತದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ವಾರ್ತೆ

### ಈರವ್ವ ನಂಜಪ್ಪನವರ



ಡಂಬಳ: ಗ್ರಾಮದ ವೀರಶೈವ ಲಿಂಗಾಯತ ಸಮಾಜದ ಹಿರಿಯರಾದ ಈರವ್ವ ಬಸಪ್ಪ ನಂಜಪ್ಪನವರ(65) ರವಿವಾರ ನಿಧನರಾದರು. ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂದು ಬಳಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮುಂಜಾನೆ ಸ್ವಗ್ರಾಮ ಡಂಬಳದಲ್ಲಿ ನಡೆಯಿತು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

### ಕಾಳಪ್ಪ ಆನಿ



ಡಂಬಳ: ಗ್ರಾಮದ ಭೋವಿ ಸಮಾಜದ ಹಿರಿಯರಾದ ಕಾಳಪ್ಪ ಪಕ್ಕಿರಪ್ಪ ಆನಿ (85) ಭಾನುವಾರ ನಿಧನ ಹೊಂದಿದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವಿದೆ.

ಮೃತರ ಅಂತ್ಯಕ್ರಿಯೆ ಸೋಮವಾರ ಮುಂಜಾನೆ ಡಂಬಳದಲ್ಲಿ ನಡೆಯಿತು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಹರದಗಟ್ಟಿಯಲ್ಲಿ ಬಂಜಾರ (ಲಮಾಣಿ) ಸಮಾಜದ ಸಮಾಲೋಚನಾ ಸಭೆಯಲ್ಲಿ ಬಸವರಾಜ ಬೊಮ್ಮಾಯಿ

# ಬಂಜಾರರು ಸಾಂಸ್ಕೃತಿಕ ಶ್ರೀಮಂತಿಕೆ ಹೆಚ್ಚಿಸಿದ್ದಾರೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಂಬಾಣಿ ಸಮಾಜ ತನ್ನದೇ ಆದ ಸಂಸ್ಕೃತಿ, ಸಂಪ್ರದಾಯ, ಉಡುಗೆ-ತೊಡುಗೆ, ಭಾಷೆಯ ಶ್ರೇಷ್ಠತೆಯಿಂದ ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಹೆಚ್ಚಿಸಿದೆ. ಶ್ರಮ ಜೀವಿಗಳು ಮತ್ತು ಸ್ವಾಭಿಮಾನದ ಪ್ರತೀಕವಾದ ಸಮಾಜದ ಯುವಕರು ದುಶ್ಚಟಗಳಿಂದ ದೂರವಿದ್ದು ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕ, ರಾಜಕೀಯ ಕ್ಷೇತ್ರಗಳಲ್ಲಿ ಬೆಳೆಯಬೇಕು ಎಂದು ಮಾಜಿ ಮುಖ್ಯಮಂತ್ರಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕಿನ ಹರದಗಟ್ಟಿ ಗ್ರಾಮದಲ್ಲಿ ಶಿರಹಟ್ಟಿ, ಲಕ್ಷ್ಮೇಶ್ವರ, ಮುಂಡರಗಿ ತಾಲೂಕಿನ ಬಂಜಾರ (ಲಮಾಣಿ) ಸಮಾಜದ ಸಮಾಲೋಚನಾ ಸಭೆಯಲ್ಲಿ ಮಾತನಾಡಿದರು.

ಬಂಜಾರ ಸಮಾಜದಲ್ಲಿ ಸಾಕಷ್ಟು ಪ್ರತಿಭಾವಂತರು ಇದ್ದು, ಅವರಿಗೆ ಅವಕಾಶಗಳನ್ನು ಕಲ್ಪಿಸಿಕೊಟ್ಟರೆ ಅದರಿಂದ ನಾಡಿಗೆ ಒಳ್ಳೆಯದಾಗುತ್ತದೆ. ಈ ನಿಟ್ಟಿನಲ್ಲಿ ಬಿಜೆಪಿ ಬಂಜಾರ ಸಮಾಜದ ಜೊತೆ ಸದಾ ಇದ್ದು, ಅವರ ಅಭ್ಯುಧಯಕ್ಕೆ ವಿಶೇಷ ಆದ್ಯತೆ ನೀಡುತ್ತಿದೆ. ತಾಂಡಾ ಅಭಿವೃದ್ಧಿ ನಿಗಮ ಆಗಬೇಕೆಂದು ನಾನು ಮತ್ತು ಸಿ.ಎಂ. ಉದಾಸಿಯವರು ಕ್ಯಾಬಿನೆಟ್‌ನಲ್ಲಿ ಗಟ್ಟಿಯಾಗಿ ಧ್ವನಿಯೆತ್ತಿದ್ದಕ್ಕೆ ತಾಂಡಾ ಅಭಿವೃದ್ಧಿ ನಿಗಮ ಸ್ಥಾಪನೆಯಾಯಿತು. ಅಗ ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದರು. ಮೊದಲನೇ ವರ್ಷದಲ್ಲಿಯೇ ಯಡಿಯೂರಪ್ಪನವರು 3 ಕೋಟಿ ರೂ ಮಂಜೂರು ಮಾಡಿದರು. ಇದರಿಂದ ತಾಂಡಾಗಳಲ್ಲಿ ಬಹಳಷ್ಟು ಸೇವಾಲಾಲರ ಸಮುದಾಯ ಭವನಗಳು ಗ್ರಂಥಾಲಯಗಳು, ಸಿ.ಸಿ. ರಸ್ತೆಗಳು ನಿರ್ಮಾಣವಾದವು.



ಈ ಸಂದರ್ಭದಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಜೆಡಿಎಸ್ ತಾಲೂಕಾ ಅಧ್ಯಕ್ಷ ಪ್ರವೀಣ ಬಾಳಿಕಾಯಿ, ಶಿವಪ್ರಕಾಶ ಮಹಾಜನಶೆಟ್ಟರ, ಶಿರಹಟ್ಟಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಪುಂಡಲೀಕ ಲಮಾಣಿ, ಶಿವಣ್ಣ ಲಮಾಣಿ, ತಾವರಪ್ಪ ಲಮಾಣಿ, ಭೀಮಸಿಂಗ ರಾಥೋಡ, ಪ್ರವೀಣ ಬಾಳಿಕಾಯಿ, ಜಾನು ಲಮಾಣಿ, ಟಾಕ್ರಪ್ಪ ಲಮಾಣಿ, ಶಂಕರ ಕಾರಬಾರಿ, ರವಿ ಲಮಾಣಿ, ಕೃಷ್ಣ ಲಮಾಣಿ, ತುಕ್ಕಪ್ಪ ಲಮಾಣಿ, ಸುರೇಶ ಲಮಾಣಿ, ಫಕೀರಪ್ಪ ಮಾಳಗಿಮನಿ, ಪಾಂಡಪ್ಪ ಲಮಾಣಿ, ಚಂದ್ರು ಲಮಾಣಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ಶಿಗ್ಗಾಂವನಲ್ಲಿ ಪ್ರತಿಯೊಂದು ತಾಂಡಾಗಳು ಅಚ್ಚುಕಟ್ಟಾಗಿ, ಸುಂದರವಾಗಿ ಇದ್ದು, ಲೋಕಸಭಾ ಸದಸ್ಯನಾಗಿ ಆಯ್ಕೆಯಾದ ಮೇಲೆ ಮುಂದಿನ ದಿನಗಳಲ್ಲಿ ಎಲ್ಲ ತಾಂಡಾಗಳಲ್ಲಿ ಉತ್ತಮ ವಾತಾವರಣ ನಿರ್ಮಾಣ ಮಾಡುವದಾಗಿ ಭರವಸೆ ನೀಡಿದರಲ್ಲದೆ, ಎಸ್‌ಸಿ ಮೀಸಲು ವಿಷಯದಲ್ಲಿ ಸಮಾಜದವರಿಗೆ ಅನ್ಯಾಯವಾಗಲು ಬಿಡುವುದಿಲ್ಲ. ಕಾಂಗ್ರೆಸ್‌ನವರು ತಮ್ಮ ಬೇಳೆ ಬೇಯಿಸಿಕೊಳ್ಳಲು ಈ ವಿಷಯದಲ್ಲಿ ರಾಜಕೀಯ ಮಾಡುತ್ತಿದ್ದು, ಈ ಬಗ್ಗೆ ಕಿವಿಗೊಡಬೇಡಿ ಎಂದು ಬಸವರಾಜ ಬೊಮ್ಮಾಯಿ ತಿಳಿಸಿದರು.

ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳನ್ನೊಳಗೊಂಡು 'ನಮ್ಮ ನಡೆ ಮತಗಟ್ಟೆಯ ಕಡೆ' ಅಭಿಯಾನ

# ಕಡ್ಡಾಯ ಮತದಾನಕ್ಕೆ ಪ್ರೇರೇಪಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮತದಾನ ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದ್ದು, ಪವಿತ್ರವಾದ ಮತದಾನದಿಂದ ಸುಭದ್ರ ಪ್ರಜಾಪ್ರಭುತ್ವ ರಾಷ್ಟ್ರ ನಿರ್ಮಾಣ ಸಾಧ್ಯ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ತಾವು ವಾಸಿಸುವ ಪ್ರದೇಶ, ಗ್ರಾಮ, ವೃತ್ತಿ ಕ್ಷೇತ್ರಗಳಲ್ಲಿ ಕಡ್ಡಾಯವಾಗಿ ಮತದಾನ ಮಾಡಬೇಕು ಮತ್ತು ಮಾಡುವಂತೆ ಪ್ರೇರೇಪಿಸಬೇಕು ಎಂದು ತಾಪಂ ಇಓ ಕೃಷ್ಣಪ್ಪ ಧರ್ಮರ ಹೇಳಿದರು.

ಅವರು ಭಾನುವಾರ ಪಟ್ಟಣದ ಪುರಸಭೆ ಎದುರು ಕಂದಾಯ ಇಲಾಖೆ, ತಾಲೂಕು ಪಂಚಾಯಿತಿ, ಪುರಸಭೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿ ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳನ್ನೊಳಗೊಂಡು ನಡೆಸಿದ 'ನಮ್ಮ ನಡೆ ಮತಗಟ್ಟೆಯ ಕಡೆ' ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿ, ಮೇ 7ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಶೇ.100ರಷ್ಟು ಮತದಾನವಾಗಬೇಕು. ಯಾವ ಮತಗಟ್ಟೆಗಳಲ್ಲಿ ಮತದಾನ ಕಡಿಮೆಯಾಗಿದೆ ಎಂಬುದನ್ನು ಪರಿಶೀಲಿಸಿ ಅಲ್ಲಿ ಮತದಾನ ಪ್ರಮಾಣ ಹೆಚ್ಚುವಂತೆ ಸ್ವತಃ ಅಧಿಕಾರಿಗಳೇ ಮನೆ ಮನೆಗೆ ಭೇಟಿ ನೀಡಬೇಕು. ಮತದಾರರಲ್ಲಿನ ನಿರಾಸಕ್ತಿ, ತಿಳುವಳಿಕೆ ಕೊರತೆ ಮತ್ತೇನಾದರೂ ಸಮಸ್ಯೆ ಇದ್ದರೆ ಪರಿಹರಿಸಿ ಪ್ರೇರೇಪಿಸುವ ಕಾರ್ಯ ಮಾಡಬೇಕು ಎಂದರು.



ಪ್ರತಿಯೊಬ್ಬ ಮತದಾರರೂ ನಿರ್ಭೀತರಾಗಿ ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಆಸೆ-ಆಮಿಷ, ಪ್ರೇರಣೆಗಳಿಗೆ ಒಳಗಾಗದೆ ಪ್ರಜಾಪ್ರಭುತ್ವ ವ್ಯವಸ್ಥೆ ಗಟ್ಟಿಗೊಳಿಸುವ ಮೂಲಕ ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಮುನ್ನುಡಿ ಬರೆಯಲು ಕಡ್ಡಾಯ ಮತದಾನ ಮಾಡಬೇಕು ಎಂದು ಹೇಳಿದರು.

ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ, ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಅಂಗನವಾಡಿ ಮೇಲ್ವಿಚಾರಕಿಯರಾದ ನಂದಾ ನವಲೆ, ಗೀತಾ ಮುಳಗುಂದ, ಪುರಸಭೆ ಕಿರಿಯ ಆರೋಗ್ಯ ನಿರೀಕ್ಷಕ, ಮಂಜುನಾಥ ಮುದಗಲ್, ಶಿವಣ್ಣ ಮ್ಯಾಗೇರಿ, ಹನುಮಂತಪ್ಪ ನಂದೆಣ್ಣನವರ, ನೇತ್ರಾ ಹೊಸಮನಿ, ಉಮಾ ಬೆಳವಿಗಿ, ಬಸವಣೆಪ್ಪ ನಂದೆಣ್ಣನವರ, ಅಂಗನವಾಡಿ ಕಾರ್ಯಕರ್ತೆಯರು ಸಹಾಯಕಿಯರು, ಪುರಸಭೆ ಸಿಬ್ಬಂದಿಗಳು, ಪೌರಕಾರ್ಮಿಕರು ಇದ್ದರು.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ಎಲ್ಲರೂ ಒಟ್ಟಾಗಿ ಇತರರನ್ನೂ ಪ್ರೇರೇಪಿಸಿ ತಪ್ಪದೇ ಮತ ಚಲಾಯಿಸುವ ಮೂಲಕ ಈ ಬಾರಿ ಹೆಚ್ಚು ಮತದಾನವಾಗಬೇಕು. ಮತದಾನ ಪ್ರಮಾಣ ಹೆಚ್ಚಿಸುವ ಚುನಾವಣಾ ಆಯೋಗದ ಉದ್ದೇಶ ಸಾಫಲ್ಯಗೊಳ್ಳುವಲ್ಲಿ ಅಧಿಕಾರಿ ವರ್ಗ ಸೇರಿದಂತೆ ಪ್ರತಿಯೊಬ್ಬ ನಾಗರಿಕರೂ ಜವಾಬ್ದಾರಿ ಮರೆಯಬೇಕು ಎಂದು ಹೇಳಿದರು.

'ಸಂವಿಧಾನ ಉಳಿಸಲು, ದೇಶದ ರಕ್ಷಣೆಗಾಗಿ ಸ್ಲಂ ಜನರ ಮತ' ಜನ ಜಾಗೃತಿ ಆಂದೋಲನ

# ಸಂವಿಧಾನ ಗೌರವಿಸುವ ಪಕ್ಷಕ್ಕೆ ಮತ ಹಾಕಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರದಲ್ಲಿರುವ ಮೋದಿ ಸರ್ಕಾರ ಕಳೆದ 10 ವರ್ಷಗಳಿಂದ ರೈತರ, ಕಾರ್ಮಿಕರ, ದುಡಿಯುವ ವರ್ಗಗಳ ಹಿತಾಸಕ್ತಿಯನ್ನು ಕೈಬಿಟ್ಟು, ಶ್ರೀಮಂತರಿಗೆ ಮತ್ತು ಕಾರ್ಪೊರೇಟ್ ಕಂಪನಿಗಳಿಗೆ ಲಾಭವಾಗುವ ನಿಟ್ಟಿನಲ್ಲಿ ತಮ್ಮ ಆಡಳಿತವನ್ನು ನಡೆಸುತ್ತ ಬಂದಿದೆ. ಮತ ದ್ವೇಷ, ಹಿಂಸೆ ಮತ್ತು ದೌರ್ಜನ್ಯಗಳನ್ನು ಹೆಚ್ಚು ಮಾಡಿ ಜನರನ್ನು ವಿಭಜನೆ ಮಾಡುತ್ತಿದೆ. ಇಂತಹ ನೀತಿಗಳನ್ನು ಸೋಲಿಸದಿದ್ದರೆ ಜನರ ಬದುಕಿಗೆ ನೆಮ್ಮದಿ ಹಾಗೂ ರಕ್ಷಣೆಯಿಲ್ಲ. ಹಾಗಾಗಿ ಸಂವಿಧಾನಕ್ಕೆ ಗೌರವ ನೀಡುವ ಪಕ್ಷದ ಅಭ್ಯರ್ಥಿಗೆ ಮತವನ್ನು ಹಾಕಬೇಕೆಂದು ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಕರೆ ನೀಡಿದರು.




ಅವರು ನಗರದ ರಾಚೋಟೇಶ್ವರ ಸ್ಲಂ ಪ್ರದೇಶದಲ್ಲಿ 'ಸಂವಿಧಾನ ಉಳಿಸಲು ಮತ್ತು ದೇಶದ ರಕ್ಷಣೆಗಾಗಿ ಸ್ಲಂ ಜನರ ಮತ' ಜನ ಜಾಗೃತಿ ಆಂದೋಲನದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ನಮ್ಮ ದೇಶವು ಪ್ರಜಾಸತ್ತಾತ್ಮಕ ಮತ್ತು ಜಾತ್ಯತೀತ ರಾಷ್ಟ್ರವಾಗಿದೆ. ನಮ್ಮ ಸಂವಿಧಾನವು ಎಲ್ಲಾ ನಾಗರಿಕರಿಗೆ ತಾರತಮ್ಯರಹಿತವಾದ ಸಮಾನ ನ್ಯಾಯವನ್ನು ಖಾತರಿಪಡಿಸುತ್ತದೆ. ಆದರೆ ನಮ್ಮ ದೇಶದ ಶೇ.70ರಷ್ಟು ಜನರು ಇಂದು ಅಭಿವೃದ್ಧಿಯಿಂದ ವಂಚಿತರಾಗಿದ್ದಾರೆ ಎಂದರು.

ಗದಗ-ಬೆಟಗೇರಿ ಅಂಜುಮನ್ ಸಂಸ್ಥೆ ಅಧ್ಯಕ್ಷ ಮಹ್ಮದ ಯುಸುಫ್ ನಮಾಜಿ ಪ್ರಸಕ್ತ ವಿದ್ಯಮಾನಗಳ ಬಗ್ಗೆ ಮಾತನಾಡಿದರು. ಗದಗ ಜಿಲ್ಲಾ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ ಅಧ್ಯಕ್ಷತೆ ವಹಿಸಿದ್ದರು. ಸ್ಲಂ ಸಮಿತಿ ಉಪಾಧ್ಯಕ್ಷ ರವಿಕುಮಾರ ಬೆಳಮಕರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಮಹಿಳಾ ಸಮಿತಿ ಸಂಚಾಲಕಿ ಮೆಹರುನಿಸಾ ಢಾಲಾಯತ, ಇಬ್ರಾಹಿಂ ಮುಲ್ಲಾ, ಶಿವಾನಂದ ಶಿಗ್ಲಿ, ಸಾಕ್ರುಬಾಯಿ ಗೋಸಾವಿ, ಮೆಹಬೂಬಸಾಬ ಬಳ್ಳಾರಿ, ಮಲೇಶಪ್ಪ ಕಲಾಲ, ಬಾಷಾಸಾಬ ಡಂಬಳ, ದಾದು ಗೋಸಾವಿ, ಖಾಜಾಸಾಬ ಇಸ್ಮಾಯಿಲನವರ, ಶಿವಪ್ಪ ಲಕ್ಕುಂಡಿ, ಸಲೀಮ ಬೈರಕದಾರ, ಚಂದ್ರಿಕಾ ರೋಣದ, ಅಫ್ರೋಜಾ ಹುಬ್ಬಳ್ಳಿ, ಶೊಸೀಲಮ್ಮ ಗೊಂದರ, ಫೈರುಜಾ ಹುಬ್ಬಳ್ಳಿ, ಮೆಹರುನಿಸಾ ಡಂಬಳ, ತಿಪ್ಪಮ್ಮ ಕೊರವರ, ಕೌಸರ ಬೈರಕದಾರ, ವಿಶಾಲಕ್ಷಿ ಹಿರೇಗೌಡ್ರ, ನಗೀನಾ ಯಲಿಗಾರ, ಪೀರಮ್ಮ ನದಾಫ, ಜೈತುನಬಿ ಶಿರಹಟ್ಟಿ, ಲಕ್ಷ್ಮೀ ಮಣವಡ್ಡರ, ಶೋಭಾ ಹಿರೇಮಠ, ಮಕ್ತುಮಸಾಬ ಮುಲ್ಲಾನವರ, ದುರ್ಗಪ್ಪ ಮಣ್ಣವಡ್ಡರ ಮುಂತಾದವರಿದ್ದರು.

ಪ್ರಗತಿಪರ ಚಿಂತಕ ಬಸವರಾಜ ಪೂಜಾರ ಮಾತನಾಡಿ, ನಮ್ಮ ದೇಶದಲ್ಲಿ ಎಲ್ಲರಿಗೂ ಸಮಾನ ಅವಕಾಶವಿರುವುದು ಸಂವಿಧಾನದ ಕೊಡುಗೆಯಾಗಿದೆ. ನಮ್ಮ ದೇಶದ ಸಂವಿಧಾನದ ಮೂಲಕ ಬಡ ಮತ್ತು ಮಧ್ಯಮ ವರ್ಗದ ವ್ಯಕ್ತಿಯೊಬ್ಬ ಪ್ರಧಾನಮಂತ್ರಿಯಾಗಬಹುದು ಮತ್ತು ರಾಷ್ಟ್ರಪತಿಯಾಗಲೂ ಸಾಧ್ಯವಿದೆ. ಮೂಲಭೂತವಾದ, ಕೋಮುವಾದ ರಾರಾಜಿಸುತ್ತದೆ. ಆಗ ನಾವು ಪ್ರಜಾಪ್ರಭುತ್ವ, ಸಮಾಜಿಕ ನ್ಯಾಯವನ್ನು ಕಳೆದುಕೊಳ್ಳುತ್ತೇವೆ. ಇದನ್ನು ತಪ್ಪಿಸಲು ನಮ್ಮ ದೇಶದ ಸಂವಿಧಾನ ಉಳಿಸುವ ಕೆಲಸವನ್ನು ಮಾಡಬೇಕಾಗಿದೆ ಎಂದರು.

# ಕಡ್ಡಾಯವಾಗಿ ಮತದಾನ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ



ಮತದಾನ ಎಂಬುದು ಭಾರತ ಸಂವಿಧಾನದ ನೀಡಿರುವ ಸಾರ್ವಭೌಮತ್ವದ ಹಕ್ಕು. ಇದು ಪ್ರತಿಯೊಬ್ಬ ಅರ್ಹ ಪ್ರಜೆಯ ಆದ್ಯ ಕರ್ತವ್ಯವೂ ಹೌದು. ಉತ್ತಮ ನಿರೀಕ್ಷೆಯ ಮತದಾನದ ಮೂಲಕ ಉತ್ತಮ ಪ್ರತಿನಿಧಿ ಗೆಲ್ಲುವಂತೆ ಪ್ರಜಾಪ್ರಭುತ್ವವೂ ಗೆಲ್ಲುತ್ತದೆ. ಪ್ರಜೆಗಳಾದ ನಾವು ಯಾವುದೇ ಆಸೆ ಆಮಿಷಗಳಿಗೆ ಬಲಿಯಾಗಿ ಭವಿಷ್ಯಕ್ಕೆ ಸಂಚಕಾರ ತಂದುಕೊಳ್ಳಬಾರದು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ರೈತ ಬಾಂಧವರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿ, ಜಾತಿ,ಮತ, ಧರ್ಮಗಳನ್ನು ಬದಿಗಿರಿಸಿ ವಿವೇಚನೆಯಿಂದ ಮತ ಚಲಾಯಿಸಿ. ಭ್ರಷ್ಟಾಚಾರ ಅಳಿಸಿ ಮತದಾನ ಮಾಡಿ. ಮತದಾರನ ನಿರ್ಧಾರ ಸುಭದ್ರ ಸರ್ಕಾರಕ್ಕೆ ಆಧಾರ, ಪ್ರಾಮಾಣಿಕರಿಗೆ ಮತ ಹಾಕಿ ದೇಶ ಕಾಪಾಡಲು ಪ್ರತಿಯೊಬ್ಬ ಪ್ರಜೆಯೂ ಮುಂದಾಗಿ ಪ್ರಜಾಪ್ರಭುತ್ವವನ್ನು ಗೆಲ್ಲಿಸಿ ಎಂದಿದ್ದಾರೆ.

# ಮತದಾರರ ಗಮನ ಸೆಳೆಯಲು ಸೆಲ್ಫಿ ಪಾಯಿಂಟ್ ಸೆಲ್ಫಿ ತೆಗೆದುಕೊಳ್ಳಲು ಮುಂದಾದ ಜನರು

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ




ಪಟ್ಟಣದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ತಾಲೂಕು ಸ್ವೀಪ್ ಸಮಿತಿ ಗಜೇಂದ್ರಗಡ ವತಿಯಿಂದ ಯುವ ಮತದಾರರು, ಸಾರ್ವಜನಿಕರ ಗಮನ ಸೆಳೆಯುಲು ಪಟ್ಟಣದ ಐದು ಕಡೆಗಳಲ್ಲಿ ಸೆಲ್ಫಿ ಪಾಯಿಂಟ್ ತೆರೆಯಲಾಗಿದ್ದು, ಮತದಾರರನ್ನು ಆಕರ್ಷಿಸುತ್ತಿವೆ.

ಗಜೇಂದ್ರಗಡ ಪಟ್ಟಣದ ಜನ ದಟ್ಟಣೆ ಇರುವ 5 ಕಡೆ ಸೆಲ್ಫಿ ಕೇಂದ್ರಗಳನ್ನು ತೆರೆಯಲಾಗಿದ್ದು, ಅದರಲ್ಲಿ ಬಸ್ ನಿಲ್ದಾಣದಲ್ಲಿ ಎರಡು, ತಾಲೂಕು ಪಂಚಾಯಿತಿ, ತಹಸೀಲ್ದಾರ್ ಕಚೇರಿ, ಕಾಲಕಾಲೇಶ್ವರ ಸರ್ಕಲ್‌ನಲ್ಲಿ ಸೆಲ್ಫಿ ಪಾಯಿಂಟ್ ಮಾಡಲಾಗಿದೆ.

ಸೆಲ್ಫಿ ಪಾಯಿಂಟ್ ಫ್ರೇಮ್‌ನಲ್ಲಿ ಚುನಾವಣಾ ಪರ್ವ-ದೇಶದ ಗರ್ವ, ನಾನು ಕಡ್ಡಾಯವಾಗಿ ಮತದಾನ ಮಾಡುತ್ತೇನೆ, ಮೈ ವೋಟ್ ಕೌಂಟ್ಸ್, ಮೇ 7ಕ್ಕೆ ನಾನು ಮತದಾನ ಮಾಡುವೆ ಹೀಗೆ ಹತ್ತಾರು ಮಾಹಿತಿ ಒಳಗೊಂಡಿದೆ. ಮಹಿಳೆಯರನ್ನು ಹೆಚ್ಚು ಸೆಳೆಯಲು ಸಖಿ ಸೆಲ್ಫಿ ಪಾಯಿಂಟ್, ಮಹಾರಾಜನಂತೆ ನಾನು ವೋಟ್ ಮಾಡಿದೆ ಎನ್ನುವ ಹೆಮ್ಮೆಯ ಸೆಲ್ಫಿ ಪಾಯಿಂಟ್, ಕುಟುಂಬ ನಿಂತು ಫೋಟೋ ತೆಗೆಸಿಕೊಳ್ಳುವ ಸೆಲ್ಫಿ ಪಾಯಿಂಟ್‌ಗಳು ಮತದಾನದ ದಿನಾಂಕ, ಮತದಾನ ಮಾಡುತ್ತೇನೆ ಎಂದು ನೆನಪಿಸುತ್ತಿವೆ.

ಪಟ್ಟಣದ ಬಸ್ ನಿಲ್ದಾಣದಲ್ಲಿ ಎರಡು ಕಡೆ ಸೆಲ್ಫಿ ಪಾಯಿಂಟ್ ಮಾಡಿದ್ದು, ಕಾಲೇಜ್ ವಿದ್ಯಾರ್ಥಿಗಳು, ಯುವಕ-ಯುವತಿಯರು, ಮಹಿಳೆಯರು ಸೇರಿದಂತೆ ಬಸ್ ನಿಲ್ದಾಣಕ್ಕೆ ಬರುವ ಪ್ರತಿಯೊಬ್ಬರೂ ಅಲ್ಲಿ ಸೆಲ್ಫಿ ತೆಗೆದುಕೊಂಡು ಹೋಗುತ್ತಿದ್ದು, ಸೆಲ್ಫಿ ಪಾಯಿಂಟ್‌ಗಳು ವಿಭಿನ್ನವಾಗಿ ಸಾರ್ವಜನಿಕರ ಗಮನ ಸೆಳೆಯುತ್ತಿವೆ.

ಮತದಾನ ಜಾಗೃತಿಗಾಗಿ ಯುವ ಮತದಾರರ, ಮಹಿಳೆಯರ ಗಮನ ಸೆಳೆಯುವ ಉದ್ದೇಶದಿಂದ ಜನದಟ್ಟಣೆ ಇರುವ 5 ಕಡೆಗಳಲ್ಲಿ ಸೆಲ್ಫಿ ಪಾಯಿ ತೆರೆಯಲಾಗಿದೆ. ಇದು ಯುವ ಮತದಾರರ ಗಮನ ಸೆಳೆಯುವುದರ ಜೊತೆಗೆ ಮತದಾನ ಪ್ರಮಾಣ ಹೆಚ್ಚಿಸಲು ಸಹಕಾರಿಯಾಗಲಿದೆ. ಈ ಸೆಲ್ಫಿ ಪಾಯಿಂಟ್‌ನಲ್ಲಿ ಸೆಲ್ಫಿ ತೆಗೆದುಕೊಂಡು ತಮ್ಮ ತಮ್ಮ ವಾಟ್ಸಾಪ್, ಫೇಸ್‌ಬುಕ್, ಇನ್ಸ್ಟಾಗ್ರಾಮ್ ಸೇರಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಇದರಿಂದ ಮತದಾನ ಜಾಗೃತಿಯಾಗಲಿವೆ.

**– ಬಸವರಾಜ ಬಡಿಗೇರ.**
ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ ಗಜೇಂದ್ರಗಡ.

# ಮೋದಿ ನೀತಿಯಿಂದ ಸಣ್ಣ ವ್ಯಾಪಾರಸ್ಥರಿಗೆ ಸಂಕಷ್ಟ




■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ಎಲ್ಲ ವರ್ಗಗಳನ್ನು ಒಟ್ಟಾಗಿ ಅಭಿವೃದ್ಧಿ ಪಥದಲ್ಲಿ ತೆಗೆದುಕೊಂಡು ಹೋಗಬಲ್ಲ ನಾಯಕತ್ವ ಕಾಂಗ್ರೆಸ್ ಪಕ್ಷಕ್ಕೆ ಮಾತ್ರ ಇದೆ. ಬಿಜೆಪಿಯವರ ಮಾತಿಗೆ ಮರುಳಾಗಿ ದೇಶವನ್ನು ಮತ್ತೊಮ್ಮೆ ಅವರ ಕೈಗೆ ಕೊಟ್ಟರೆ ಸಮಾಜಗಳ ನಡುವೆ ಕಂದಕಗಳನ್ನು ಸೃಷ್ಟಿ ಮಾಡಿ ಶಾಂತಿಯನ್ನು ಕದಡುತ್ತಾರೆ. ಹಾಗಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ನನಗೆ ನಿಮ್ಮ ಅಮೂಲ್ಯವಾದ ಮತವನ್ನು ನೀಡಬೇಕೆಂದು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮನವಿ ಮಾಡಿದರು.

ಚುನಾವಣಾ ಪ್ರಚಾರದ ಅಂಗವಾಗಿ ನಗರದ ಎಪಿಎಂಸಿ ಯಾರ್ಡ್‌ನಲ್ಲಿ ಬಣಜಿಗ ಸಮಾಜದ ಮುಖಂಡರ ಜೊತೆ ಸಭೆ ನಡೆಸಿ ಅವರು ಮಾತನಾಡಿದರು.

ಬಹುರಾಷ್ಟ್ರೀಯ ಹಾಗೂ ಶ್ರೀಮಂತ ಕಾರ್ಪೋರೇಟ್ ಕಂಪನಿಗಳಿಗೆ ಅನುಕೂಲ ಕಲ್ಪಿಸಿದ ಕೇಂದ್ರ ಸರಕಾರದ ಜನವಿರೋಧಿ ನೀತಿಗಳಿಂದಾಗಿ ದೇಶದಲ್ಲಿ ಸಣ್ಣ ಹಾಗೂ ಮಧ್ಯಮ ವರ್ಗದ ವ್ಯಾಪಾರಸ್ಥರು ಸಂಕಷ್ಟಕ್ಕೊಳಗಾಗಿದ್ದಾರೆ. ಬೆಲೆ ಏರಿಕೆಯಿಂದಾಗಿ ಮಧ್ಯಮ ವರ್ಗದ ಜನರು ಪರಿತಪಿಸುತ್ತಿದ್ದಾರೆ. ವ್ಯಾಪಾರಸ್ಥರಿಂದ ವಸೂಲಿ ಮಾಡಿದ ಜಿಎಸ್‌ಟಿ ಹಣದಲ್ಲಿ ರಾಜ್ಯಕ್ಕೆ ಬರಬೇಕಿದ್ದ, ರಾಜ್ಯದ ಅಭಿವೃದ್ಧಿಗೆ ಕಾರಣವಾಗಬೇಕಿದ್ದ ರಾಜ್ಯದ ಪಾಲಿನ ತೆರಿಗೆ ಹಣ ನೀಡದೇ ಪರೋಕ್ಷವಾಗಿ ಕರ್ನಾಟಕದ ಜನರ ಸಂಕಷ್ಟಕ್ಕೆ ಕಾರಣವಾಗಿರುವ ಕೇಂದ್ರ ಸರಕಾರದ 10 ವರ್ಷಗಳ ದುರಾಡಳಿತ ಕೊನೆಗೊಳಿಸಿ ಜನಪರ ಕಾಂಗ್ರೆಸ್ ಸರಕಾರ ಸ್ಥಾಪಿಸುವ ಕಾಲ ಬಂದಿದೆ. ದಯವಿಟ್ಟು ಕಾಂಗ್ರೆಸ್‌ನ್ನು ಬೆಂಬಲಿ ನನಗೆ ಮತನೀಡಿ ಎಂದು ಅವರು ಮನವಿ ಮಾಡಿದರು.

ರಾಜ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯ ಸಚಿವ ಎಚ್. ಕೆ. ಪಾಟೀಲ ನೇತೃತ್ವ ವಹಿಸಿದ್ದರು. ಬಣಜಿಗ ಸಮಾಜದ ಅಧ್ಯಕ್ಷ ನಾಗೇಶ ಸವಡಿ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಶಾಸಕ ಜಿ. ಎಸ್. ಗಡ್ಡದೇವರಮಠ, ಕೆಪಿಸಿಸಿ ಉಪಾಧ್ಯಕ್ಷ ಡಿ. ಆರ್. ಪಾಟೀಲ, ಮುಖಂಡರಾದ ಮಹೇಂದ್ರ ಸಿಂಘಿ, ಸಮಾಜದ ರೇವಣಪ್ಪ ಯಳಮಲಿ, ಉಮೇಶ ಹುಬ್ಬಳ್ಳಿ, ಶಶಿಕಲಾ ಅಕ್ಕಿ, ಲಲಿತಾ ಅಸೂಟಿ, ಲಲಿತಕ್ಕ ಇಂಗಳಳ್ಳಿ, ವಿಶ್ವನಾಥ ರಾಮನಕೊಪ್ಪ ಸೇರಿದಂತೆ ಅನೇಕ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಶ್ರೀ ದತ್ತಾತ್ರೇಯ ದೇವಸ್ಥಾನದ ನೂತನ ಆಡಳಿತ ಮಂಡಳಿ ಸೇವಾಕಾರ್ಯ ಹಸ್ತಾಂತರ ಸಮಾರಂಭ

# ಬ್ರಾಹ್ಮಣರು ಯುಕ್ತಿಯೊಂದಿಗೆ ಶಕ್ತಿಯನ್ನೂ ಹೊಂದಬೇಕು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಬ್ರಾಹ್ಮಣರು ಜನ್ಮತಃ ಸಾಧು ಸ್ವಭಾವದವರು. ಅವರಾಗಿಗೇ ಎಂದಿಗೂ ಯಾರ ಗೊಡವೆಗೂ ಹೋಗುವುದಿಲ್ಲ. ಯುಕ್ತಿ, ಜಾಣತನ ಭಗವಂತ ಅವರಿಗೆ ನೀಡಿರುವ ವರವಾಗಿದೆ. ಈ ಯುಕ್ತಿಯೊಂದಿಗೆ ಅವರು ಶಕ್ತಿಯನ್ನೂ ಹೊಂದಿರಬೇಕಾದುದು ಇಂದಿನ ಅವಶ್ಯಕತೆಗಳಲ್ಲೊಂದಾಗಿದೆ ಎಂದು ಗದುಗಿನ ಖ್ಯಾತ ವೈದ್ಯ ಡಾ. ಕುಶಾಲ ಡಿ.ಗೋಡಖಿಂಡಿ ಹೇಳಿದರು.

ಪಟ್ಟಣದ ಇತಿಹಾಸ ಪ್ರಸಿದ್ಧವಾದ ಶ್ರೀ ದತ್ತಾತ್ರೇಯ ದೇವಸ್ಥಾನದ ನೂತನ ಆಡಳಿತ ಮಂಡಳಿ ಪದಾಧಿಕಾರಿಗಳಿಗೆ ಸೇವಾಕಾರ್ಯ ಹಸ್ತಾಂತರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮೊಳಗಿನ ಕಚ್ಚಾಟಗಳನ್ನು ಬಿಟ್ಟು ಒಗ್ಗಟ್ಟಾಗಿದ್ದರೆ ಯಾವ ದುಷ್ಟ ಶಕ್ತಿಯೂ ನಮ್ಮೆದುರಿಗೆ ಬಂದು ನಿಲ್ಲುವುದಿಲ್ಲ. ಬ್ರಾಹ್ಮಣರಿಲ್ಲದ ಭಾರತವನ್ನು ಊಹಿಸಿಕೊಳ್ಳಲೂ ಸಾಧ್ಯವಿಲ್ಲ. ಬ್ರಾಹ್ಮಣರ ಬಗ್ಗೆ ಸಮಾಜದಲ್ಲಿರುವ ದೂರುಗಳು ದೂರಾಗಬೇಕು. ಯೋಗ್ಯತೆ ಇರುವ ಯಾವುದೇ ವ್ಯಕ್ತಿಯನ್ನು ಅವನ ಜಾತಿ-ಮತ-ಪಂಥಗಳನ್ನು ನೋಡದೆ ಗೌರವಿಸುವ ಗುಣವಿರುವುದು ಬ್ರಾಹ್ಮಣರಲ್ಲಿ ಮಾತ್ರ. ಇದಕ್ಕೆ ಶ್ರೀರಾಮ, ಶ್ರೀಕೃಷ್ಣ ಇತ್ಯಾದಿಗಳೆ ಪ್ರತ್ಯಕ್ಷ ಉದಾಹರಣೆಗಳು ಎಂದರು.

ಡಾ. ರಾಮಾಶಾಸ್ತ್ರಿ ಜೀರೆ ಮಾತನಾಡಿ, ಬ್ರಾಹ್ಮಣರಲ್ಲಿ ಸಂಘಟನೆ ಮಾಡುವುದು ಅಷ್ಟು ಸುಲಭದ ಕೆಲಸವಲ್ಲ. ಏಕೆಂದರೆ ಇಲ್ಲಿ ಎಲ್ಲರೂ ಜಾಣರೇ ಇರುವುದರಿಂದ ಯಾರೂ ಯಾರ ಮಾತನ್ನೂ ಕೇಳದ ಮಟ್ಟವನ್ನು ಮುಟ್ಟಿದ್ದೇವೆ. ಬದಲಾಗಿ ನಾವು ನಮ್ಮ ಸಮಾಜದ ವ್ಯಕ್ತಿ ಏನೇ ಸಾಧನೆ ಮಾಡುತ್ತೇನೆಂದರೂ ಅವನಿಗೆ ಬೆನ್ನೆಲುಬಾಗಿ ನಿಂತು ಅವನನ್ನು ಪ್ರೋತ್ಸಾಹಿಸಬೇಕು. ನರೇಗಲ್ಲದ ಶ್ರೀ ದತ್ತ ಭಕ್ತ ಮಂಡಳಿ ಇಂತಹ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಸಭೆಯನ್ನುದ್ದೇಶಿಸಿ ಆಡಳಿತ ಮಂಡಳಿ ನೂತನ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ, ಅಧ್ಯಕ್ಷತೆ ವಹಿಸಿದ್ದ ನಿಕಟಪೂರ್ವ ಅಧ್ಯಕ್ಷ ಸಂಜೀವಕುಮಾರ ಕುಲಕರ್ಣಿ ಮಾತನಾಡಿದರು. ಸ್ಫೂರ್ತಿರಾಣಿ ಕುಲಕರ್ಣಿ ಪ್ರಾರ್ಥಿಸಿದರು. ಅರ್ಚನಾ ಕುಲಕರ್ಣಿ ಸ್ವಾಗತಿಸಿದರು. ಮುಖ್ಯ ಶಿಕ್ಷಕ ಸುನೀಲ ಅಂಬೇಕರ ನಿರೂಪಿಸಿದರು. ಪರಿಮಳಾ ಗ್ರಾಮಪುರೋಹಿತ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪಲ್ಲವಿ ಗ್ರಾಮಪುರೋಹಿತ ವಂದಿಸಿದರು.

ಅರ್ಚಕರಾದ ಶ್ರೀವಲ್ಲಭಭಟ್ಟ ಸದರಜೋಷಿ, ಎಸ್.ಎಚ್. ಜೋಷಿ, ಬಿ.ಎಲ್. ಕುಲಕರ್ಣಿ, ಎ.ಜಿ. ಕುಲಕರ್ಣಿ, ಹುಕುಮ್‌ಸಿಂಗ ಪುರೋಹಿತ, ಖೀಮಸಿಂಗ್ ಪುರೋಹಿತ, ಎಸ್.ಎಚ್. ಕುಲಕರ್ಣಿ, ಮುಕುಂದ ಸೂರಭಟ್ಟನವರ, ವಿಶ್ವನಾಥ ಗ್ರಾಮಪುರೋಹಿತ, ಅರುಣ ಸೂರಭಟ್ಟನವರ, ಆದರ್ಶ ಕುಲಕರ್ಣಿ, ರಘುನಾಥ ಕೊಂಡಿ, ಪ್ರಕಾಶ ಕಾಳೆ, ಮಂಜುನಾಥ ಗ್ರಾಮಪುರೋಹಿತ, ಉದಯ ಸವದಿ, ಆನಂದ ಕುಲಕರ್ಣಿ, ವೆಂಕಟೇಶ ಕುಲಕರ್ಣಿ, ಹರೀಶ ಕುಲಕರ್ಣಿ, ಅಜಿತ ಕುಲಕರ್ಣಿ, ಗಿರೀಶ ಕುಲಕರ್ಣಿ, ಆನಂದ ಕಾಳೆ, ಬಾಬಣ್ಣ ಕಾಳೆ, ಪಿ.ಎಸ್. ಕುಲಕರ್ಣಿ, ಪ್ರಣವ ಕುಲಕರ್ಣಿ, ಅರುಣ ಬಿ.ಕುಲಕರ್ಣಿ ಮುಂತಾದವರು ಪಾಲ್ಗೊಂಡಿದ್ದರು.

ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ ಮಾತನಾಡಿ, ಒಂದು ಸಂಘಟನೆ ಸಶಕ್ತವಾಗಿ ನಡೆಯಬೇಕೆಂದರೆ ಅದರಲ್ಲಿನ ಪದಾಧಿಕಾರಿಗಳು ಮೊದಲು ತ್ಯಾಗದ ಮನೋಭಾವನೆಯನ್ನು ಬೆಳಸಿಕೊಳ್ಳಬೇಕು. ಎಲ್ಲರನ್ನೂ ಒಂದಾಗಿಸಿಕೊಂಡು, ಎಲ್ಲರ ಸಹಕಾರದೊಂದಿಗೆ ನಡೆದರೆ ಆ ಸಂಘಟನೆ ಎತ್ತರಕ್ಕೇರುವುದರಲ್ಲಿ ಅನುಮಾನವಿಲ್ಲ ಎಂದರು.

## ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ರಾಮಣ್ಣ ಲಮಾಣಿ ಪ್ರಚಾರ

# ಕ್ಷೇತ್ರದ ಅಭಿವೃದ್ಧಿಗಾಗಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಈ ಬಾರಿ ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿರುವ ಆನಂದಸ್ವಾಮಿ ಗಡ್ಡದೇವರಮಠ ಗೆಲ್ಲುವ ಮೂಲಕ ದಾಖಲೆ ಬರೆಯಲಿದ್ದಾರೆ. ಹಾವೇರಿ ಕ್ಷೇತ್ರ ಅಭಿವೃದ್ಧಿಯಿಂದ ವಂಚಿತವಾಗಿದ್ದು, ಕ್ಷೇತ್ರದ ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸುವದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಮಾಜಿ ಶಾಸಕ ಹಾಗೂ ಕಾಂಗ್ರೆಸ್ ಮುಖಂಡ ರಾಮಣ್ಣ ಲಮಾಣಿ ಹೇಳಿದರು.

ಅವರು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ಕ್ಷೇತ್ರಾದ್ಯಂತ ಪ್ರಚಾರ ಕಾರ್ಯ ಕೈಗೊಂಡು, ಮತದಾರರನ್ನುದ್ದೇಶಿಸಿ ಮಾತನಾಡಿದರು.

ನಾನು ಈಗಾಗಲೇ ಸಾಕಷ್ಟು ಪ್ರವಾಸ, ಪ್ರಚಾರ ಕಾರ್ಯದಲ್ಲಿ ಭಾಗವಹಿಸಿದ್ದು, ಎಲ್ಲೆಡೆ ಯುವಕ, ಯುವತಿಯರು ಸ್ವಯಂಪ್ರೇರಿತರಾಗಿ ಆನಂದಸ್ವಾಮಿಯವರ ಬಗ್ಗೆ ಅಭಿಮಾನ ವ್ಯಕ್ತಪಡಿಸುವದರ ಜೊತೆಗೆ ಉತ್ತಮ ಪ್ರತಿಕ್ರಿಯೆ ನೀಡುತ್ತಿದ್ದಾರೆ. ಬಹುತೇಕ ಮನೆಯಲ್ಲಿ ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳ ಲಾಭ ಪಡೆದವರಿದ್ದು, ಮನೆಯೊಡತಿಗೆ ರೂ.2000, 10 ಕೆಜಿ ಅಕ್ಕಿ, ಯುವನಿಧಿ, ಗೃಹಜ್ಯೋತಿ, ಶಕ್ತಿ ಯೋಜನೆ ಇತ್ಯಾದಿಗಳನ್ನು ಅನುಷ್ಠಾನಗೊಳಿಸಿರುವ ಕಾಂಗ್ರೆಸ್ ಸರ್ಕಾರದ ಬಗ್ಗೆ ಅಭಿಮಾನದ ಮಾತುಗಳನ್ನಾಡುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಕನಿಷ್ಠ 20 ಸೀಟುಗಳಲ್ಲಿ ಗೆಲವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಅದರಲ್ಲಿ ಹಾವೇರಿ ಕ್ಷೇತ್ರದಲ್ಲಿ ಆನಂದಸ್ವಾಮಿ ಗಡ್ಡದೇವಮಠ ಅವರು ಸುಮಾರು 2 ಲಕ್ಷಕ್ಕೂ ಅಧಿಕ ಮತಗಳಿಂದ ಜಯಗಳಿಸುವ ಸಂಪೂರ್ಣ ವಿಶ್ವಾಸವನ್ನು ಹೊಂದಿರುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಮಾಜಿ ಅಧ್ಯಕ್ಷ ಸೋಮಣ್ಣ ಬೆಟಗೇರಿ, ರಾಜು ಮಡಿವಾಳರ, ಶೇಖಣ್ಣ ಕಾಳೆ, ವೀರೇಂದ್ರಗೌಡ ಪಾಟೀಲ, ಬಸವರಾಜ ಹೊಳಲಾಪೂರ, ರಾಜಣ್ಣ ಕುಂಬಿ, ಬಸವರಾಜ ಓದುನವರ, ಜಯಕ್ಕ ಕಳ್ಳಿ, ಭಾಗ್ಯಶ್ರೀ ಬಾಬಣ್ಣ, ಪಿದೋ೯ಶ ಆಡೂರ, ಮಹಾದೇವಪ್ಪ ಅಣ್ಣಿಗೇರಿ, ಶಶಿಕಲಾ ಬಡಿಗೇರ, ರಾಮಣ್ಣ ಗಡದವರ, ರಾಮು ಅಡಗಿಮನಿ, ಸೇರಿದಂತೆ ನೂರಾರು ಕಾರ್ಯಕರ್ತರು, ಮುಖಂಡರು ಹಾಜರಿದ್ದರು.

## ಕಾಂಗ್ರೆಸ್ ಸರ್ಕಾರದಿಂದ ಬಡವರ ಕಲ್ಯಾಣಕ್ಕೆ ಒತ್ತು



■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ವಿಧಾನಸಭಾ ಚುನಾವಣೆಯಲ್ಲಿ ನನ್ನನ್ನು ಬೆಂಬಲಿಸಿ ಗೆಲ್ಲಿಸಿದ ರೀತಿಯಲ್ಲಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಬೆಂಬಲಿಸಿ, ಗೆಲ್ಲಿಸಿಕೊಡಬೇಕು ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮನವಿ ಮಾಡಿದರು. ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ರಾಜಸ್ಥಾನ ಹಾಗೂ ಜೈನ್ ಸಮಾಜದವರ ಸಭೆಯಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ನಮ್ಮ ಬದುಕನ್ನು ಮುಂದಿಟ್ಟುಕೊಂಡು ಅಭಿವೃದ್ಧಿ, ಸಂವಿಧಾನ ರಕ್ಷಣೆ ಹಾಗೂ ಬಡವರ ಕಲ್ಯಾಣಗಳಿಗೆ ಒತ್ತುಕೊಟ್ಟು ಚುನಾವಣೆ ಎದುರಿಸುತ್ತಿದೆ. ಮುಖಂಡ ಮಹೇಂದರ್ ಸಿಂಘ್ವಿ ಮಾತನಾಡಿ, ನಯ, ವಿನಯತೆ, ಸರಳತೆ ಮನೋಭಾವ ಹೊಂದಿರುವ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ನಮ್ಮ ಸಮಾಜದ ಪ್ರತಿಯೊಬ್ಬರೂ ಮತ ನೀಡುವ ಮೂಲಕ ಅವರನ್ನು ಗೆಲ್ಲಿಸಬೇಕು ಎಂದು ಸಮಾಜದವರಲ್ಲಿ ಮನವಿ ಮಾಡಿದರು. ಮುಖಂಡ ಅಶೋಕ ಜೈನ್ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಮುಖಂಡರಾದ ರೂಪಚಂದ್ ಜೈನ್, ಅಮೃತಲಾಲ್ ಜೈನ್, ಮದನ್ ಬನ್ಸಾಲಿ, ಮನೋಜ ಭಾಪಣಾ, ದೀಪಾ ರಾಮಜಿ ಹಾಗೂ ರಾಜಸ್ಥಾನ ನಿವಾಸಿಗಳು ಇದ್ದರು.

## 9ನೇ ವಾರ್ಡ್‌ನಲ್ಲಿ ಸಚಿವ ಎಚ್.ಕೆ. ಪಾಟೀಲ ಪ್ರಚಾರ

# ಬಡವರು-ಉಳ್ಳವರ ನಡುವಿನ ಚುನಾವಣೆ

■ ವಿಜಯಸಾಕ್ಷಿ ಸುದ್ದಿ, ಗದಗ



ಮೇ 7ರಂದು ನಡೆಯುವ ಚುನಾವಣೆ ಅತೀ ಮಹತ್ವದ ಚುನಾವಣೆಯಾಗಿದ್ದು, ಬಡವರು ಮತ್ತು ಉಳ್ಳವರ ನಡುವಿನ ಚುನಾವಣೆಯಾಗಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 9ನೇ ವಾರ್ಡಿನಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಬಡವರ ಪರವಾಗಿ ಕಾಂಗ್ರೆಸ್ ಹೋರಾಟ ಮಾಡುತ್ತಿದ್ದರೆ, ಅನೇಕ ಪಕ್ಷಗಳು ವಿವಿಧ ರೀತಿಯಲ್ಲಿ ಅಡ್ಡಿಪಡಿಸುತ್ತಿದ್ದಾರೆ. ಹೊಸ ಗ್ಯಾರಂಟಿ ಯೋಜನೆಗಳಿಗೂ ಅಡ್ಡಿಯಾಗಿ ದೂರು ನೀಡುತ್ತಿದ್ದಾರೆ. ಇದರಿಂದ ನ್ಯಾಯಾಲಯವು ಕೂಡ ಒಂದು ಪಕ್ಷ ನೀಡುವ ಗ್ಯಾರಂಟಿ ಹಾಗೂ ಭರವಸೆಗಳು ಆ ಪಕ್ಷಕ್ಕೆ ಬಿಟ್ಟಿದ್ದು ಎಂದು ದೂರು ನೀಡಿದ ಪಕ್ಷಗಳಿಗೆ ಛೀಮಾರಿ ಹಾಕಿದೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಹಿಳೆಯರ ಮಾಂಗಲ್ಯಸೂತ್ರವನ್ನು ಕಿತ್ತು ಮುಸ್ಲಿಮರಿಗೆ ನೀಡುತ್ತಾರೆ ಎಂಬ ಕಟ್ಟುಕಥೆಗಳನ್ನು ಹೇಳುವ ಮೂಲಕ ಮತದಾರರನ್ನು ದಿಕ್ಕು ತಪ್ಪಿಸುತ್ತಿದ್ದಾರೆ. ಸ್ವತಃ ಮೋದಿ ಅವರೇ ಭಾರತ ಮಾತೆಯ ಆಭರಣಗಳಾದ ರೈಲು, ರಸ್ತೆ, ಏರ್‌ಪೋರ್ಟ್, ವಿದ್ಯುತ್ ಕಂಪನಿಗಳು, ಬಂದರುಗಳು ಸೇರಿ ಒಂದೊಂದರಂತೆ ಆಭರಣಗಳನ್ನು ಕಿತ್ತು ಆದಾನಿ, ಅಂಬಾನಿಯವರಿಗೆ ಮಾರಾಟ ಮಾಡುತ್ತಿದ್ದಾರೆ. ದೇಶದ, ಬಡವರ, ದುಡಿಯುವವರ ಹಿತದೃಷ್ಟಿಯಿಂದ ತಮ್ಮ-ತಮ್ಮಲ್ಲಿನ ಮನಸ್ತಾಪಗಳನ್ನು ಬಿಟ್ಟು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

9ನೇ ವಾರ್ಡಿನ ಸದಸ್ಯ ಚಂದ್ರು ಕರಿಸೋಮನಗೌಡ್ರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಖಂಡರಾದ ವೀರನಗೌಡ ಪಾಟೀಲ, ಶ್ರೀರಾಮ ಶಿಂಧೆ, ಹೇಮಚಂದ್ರ ಕಬಾಡಿ, ಅಜ್ಜನಗೌಡ ಹಿರೇಮನಿಪಾಟೀಲ, ಮಲ್ಲಿಕಾರ್ಜುನ ಕಲ್ಮನಿ, ಟೀಕಾನಸಾ ಅರವಟಗಿ, ಪ್ರಕಾಶ ಬಡಿಗೇರ, ಭೀಮಣ್ಣ ಪೂಜಾರ, ಬಾಬು ಬದಿ, ಸದಾನಂದ ಮೇರವಾಡೆ, ಮಲ್ಲೇಶಪ್ಪ ಪಲ್ಲೇದ, ಮಲ್ಲು ಬಾರಕೇರ, ಚನ್ನಪ್ಪ ಕೌಜಗೇರಿ, ಸಾದಿಕ್ ಬಳ್ಳಾರಿ, ಬಸವರಾಜ ಬಾರಕೇರ, ಗೂಳಪ್ಪ ರೊಟ್ಟಿ, ಮೇಘಾ ಮುದಗಲ್, ಸುಮಾ ಸುಗಂಧಿ, ಪಾರವ್ವ ಜಕ್ಕಲಿ, ವಿದ್ಯಾ ಗೋಂದಕರ, ಮಾಳವ್ವ, ಜಯಶ್ರೀ ಪೂಜಾರ, ಲಕ್ಷ್ಮೀ ಕೌಜಗೇರಿ ಸೇರಿ ಅನೇಕರು ಇದ್ದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ನಿರೀಕ್ಷೆಗೂ ಮೀರಿ ಸ್ಪಂದನೆ ದೊರೆಯುತ್ತಿದೆ. ಮಹಿಳೆಯರು ಬಹಳ ಉತ್ಸಾಹದಿಂದ ಪಾಲ್ಗೊಳ್ಳುತ್ತಿದ್ದು, ನಮಗೆ ಗೊತ್ತಿಲ್ಲದ ರೀತಿಯಲ್ಲಿ ಹೊಸ ಅಲೆಯೊಂದು ಸೃಷ್ಟಿಯಾಗುತ್ತಿದೆ ಎಂದರು.

## ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಪ್ರತಾಪ ಸಿಂಹ ರೋಡ್‌ಶೋ

# ಬೊಮ್ಮಾಯಿಯವರನ್ನು ಮೀರಿಸುವ ರಾಜಕಾರಣಿಯಿಲ್ಲ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಎಪ್ರಿಲ್ 26ರಂದು ಕರ್ನಾಟಕದಲ್ಲಿ ನಡೆದ 14 ಲೋಕಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಸಾಧಿಸುವ ಸಂಭವವಿದ್ದು, ಮೇ.7ರಂದು ನಡೆಯುವ ಇನ್ನುಳಿದ 14 ಕ್ಷೇತ್ರಗಳಲ್ಲಿಯೂ ಬಿಜೆಪಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಮೋದಿಯವರಿಗೆ ಕಾಣಿಕೆಯಾಗಿ ನೀಡೋಣ. ಬೊಮ್ಮಾಯಿಯವರನ್ನು ಆಯ್ಕೆ ಮಾಡಿ ಮೋದಿಯವರ ಸಂಪುಟದಲ್ಲಿ ಸಚಿವರಾಗಿ ನಿಮ್ಮೂರಿಗೆ ವಾಪಸ್ಸು ಬಂದಾಗ ಸ್ವಾಗತಿಸಲು ಸಜ್ಜಾಗಿ ಎಂದು ಬಿಜೆಪಿ ಸಂಸದ ಪ್ರತಾಪ ಸಿಂಹ ಕರೆ ನೀಡಿದರು.

ಅವರು ಪಟ್ಟಣದ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರ ಪ್ರಚಾರಾರ್ಥವಾಗಿ ಸೋಮವಾರ ನಡೆದ ರೋಡ್‌ಶೋನಲ್ಲಿ ಪಾಲ್ಗೊಂಡು ಮಾತನಾಡಿದರು.

ಬಸವರಾಜ ಬೊಮ್ಮಾಯಿಯವರನ್ನು ಕೇವಲ ಲೋಕಸಭಾ ಕ್ಷೇತ್ರದ ಸಂಸದರಾಗಿ ಆಯ್ಕೆ ಮಾಡುತ್ತಿಲ್ಲ, ಮೋದಿಯವರ ಸಂಪುಟದಲ್ಲಿ ಸಂಪುಟ ದರ್ಜೆ ಕೇಂದ್ರ ಸಚಿವರಾಗುವಂತಹ ಒಬ್ಬ ವ್ಯಕ್ತಿಯನ್ನು ನೀವು ಆಯ್ಕೆ ಮಾಡುತ್ತಿದ್ದೀರಿ.

ಬಸವರಾಜ ಬೊಮ್ಮಾಯಿ ಈ ಭಾಗದಲ್ಲಿ ಚಿರಪರಿಚಿತರು ಮತ್ತು ಕುಷ್ಟಗಿ ಏತ ನೀರಾವರಿ ಯೋಜನೆ, ಕಳಸಾ ಬಂಡೂರಿ ಯೋಜನೆ, ಮೇಕೆದಾಟು ಯೋಜನೆಗೆ ಅನುಮತಿ ನೀಡಿದವರು. ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ರೂ.ಗಳನ್ನು ಕೊಡಿಸಿದ್ದು, ಕ್ಷೇತ್ರದ ಸಂಪೂರ್ಣ ಅಭಿವೃದ್ಧಿಗೆ ಬೊಮ್ಮಾಯಿಯವರನ್ನು ಆಯ್ಕೆ ಮಾಡುವದು ಅಗತ್ಯವಾಗಿದೆ. ಕೇಂದ್ರದಲ್ಲಿ ಬಿಜೆಪಿ ಸರಕಾರ ಬರದಿದ್ದಲ್ಲಿ ಹಿಂದೂಗಳಿಗೆ ಉಳಿಗಾಲವಿಲ್ಲ ಎನ್ನುವ ನಿಟ್ಟಿನಲ್ಲಿ 2014ರಲ್ಲಿ ನಿಮ್ಮ ಒಂದೊಂದು ಮತದ ಬಲದಿಂದ ನರೇಂದ್ರ ಮೋದಿಯವರನ್ನು ಪ್ರಧಾನಿಯನ್ನಾಗಿ ಆಯ್ಕೆ ಮಾಡಲು ಸಾಧ್ಯವಾಗಿದೆ. ಅಂದಿನಿಂದ ಇಂದಿನವರೆಗೂ ದೇಶ ಸುಭಿಕ್ಷೆಯಿಂದ, ಪ್ರಗತಿಯಿಂದ ಸಾಗುವಂತೆ ಮಾಡಿದ ಕೀರ್ತಿ ಮೋದಿಜೀಯವರಿಗೆ ಸಲ್ಲುತ್ತದೆ. ನಿಮ್ಮ ಮತ ಬೊಮ್ಮಾಯಿಯವರನ್ನು ಕೇಂದ್ರದಲ್ಲಿ ಒಬ್ಬ ಸಚಿವರನ್ನಾಗಿ ಮಾಡಲಿದೆ. ನೀರಾವರಿ ವಿಚಾರದಲ್ಲಿ ಅವರನ್ನು ಮೀರಿಸುವ ರಾಜಕಾರಣಿ ಇನ್ನೊಬ್ಬರಿಲ್ಲ ಎಂದರು.

ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಮಾತನಾಡಿ, ದೇಶದ ಉತ್ತಮ ಭವಿಷ್ಯಕ್ಕಾಗಿ, ಭಾರತದ ಸುರಕ್ಷತೆಗಾಗಿ ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಸರ್ಕಾರ ಮತ್ತೆ ಅಸ್ತಿತ್ವಕ್ಕೆ ಬರಲಿದೆ. ದಕ್ಷ, ಪ್ರಾಮಾಣಿಕ ದೇಶಭಕ್ತ ನರೇಂದ್ರ ಮೋದಿಯವರು ಮತ್ತೊಮ್ಮೆ ಈ ದೇಶದ ಪ್ರಧಾನಿಯಾಗಿ ಆಡಳಿತದ ಚುಕ್ಕಾಣಿ ಹಿಡಿಯಲಿದ್ದಾರೆ ಎಂದು ಹೇಳಿದರು.

ರೋಡ್‌ಶೋ ಶಿಗ್ಲಿ ನಾಕಾ ಬಳಿ ಪ್ರಾರಂಭವಾಗಿ ಬಜಾರ ರಸ್ತೆ, ಹಾವಳಿ ಹನುಮಂತದೇವರ ದೇವಸ್ಥಾನ, ದರ್ಗಾ ರಸ್ತೆ, ಕೋರ್ಟ್ ರಸ್ತೆಯಟ್ಮೂಲಕ ಹಾಯ್ದು ಪಂಪ ಸರ್ಕಲ್ ಬಳಿ ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ, ಸಣ್ಣೀರಪ್ಪ ಹಳ್ಳೆಪ್ಪನವರ, ಮಂಜುನಾಥ ಮಾಗಡಿ, ಶಿವಪ್ರಕಾಶ ಮಹಾಜನಶೆಟ್ರ, ಪ್ರವೀಣ ಬಾಳಿಕಾಯಿ, ಡಿ.ವಾಯ್. ಹುನಗುಂದ, ಭರತ ಬೊಮ್ಮಾಯಿ, ಸುನೀಲ ಮಹಾಂತಶೆಟ್ಟರ, ಪೂರ್ಣಾಜಿ ಖರಾಟೆ, ನಿಂಗಪ್ಪ ಬನ್ನಿ ಸೇರಿದಂತೆ ಅನೇಕ ಮುಖಂಡರು, ಸಾವಿರಾರು ಕಾರ್ಯಕರ್ತರು ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka